ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

DAIRYADA DAARI NEWS PAPER

EMAIL : dairyadadaari@gmail.com ಸಂಪುಟ: 01 ಸಂಚಿಕೆ: 162

ಬೆಲೆ ರೂ : 2.00

ರಾಯಚೂರು

ಪುಟ: 4

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795 ಶುಕ್ರವಾರ: 05-06-2026

## ರಾಯಚೂರು ಭಾರತ ವನ ಯೋಜನೆಗೆ ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ಚಾಲನೆ

ಧೈರ್ಯದ ದಾರಿ

**ರಾಯಚೂರು ಜೂನ್ 04 :** ಭಾರತ ಸರ್ಕಾರದ ಹಣಕಾಸು ಮತ್ತು ಕಾರ್ಪೊರೇಟ್ ವ್ಯವಹಾರಗಳ ಸಚಿವರಾದ ನಿರ್ಮಲಾ ಸೀತಾರಾಮನ್ ಅವರು ಜೂನ್ 04ರ ಗುರುವಾರ ದಂದು ರಾಯಚೂರು ಜಿಲ್ಲಾಡಳಿತ ಭವನದ ಆವರಣದಲ್ಲಿ ಜಿಲ್ಲಾಡಳಿತ, ಎಸ್‌ಪಿಎಮ್‌ಸಿಐಎಲ್ ಸಂಸ್ಥೆಯ ಸಾಮಾಜಿಕ ಕಳಕಳಿಯ (ಸಿಎಸ್‌ಆರ್) ಸಹಯೋಗದೊಂದಿಗೆ ಜೂನ್ 05ರ ವಿಶ್ವ ಪರಿಸರ ದಿನಾಚರಣೆ-2026ರ ಅಂಗವಾಗಿ (ವಿಶೇಷ ಹಸಿರು ಅಭಿಯಾನ ಅಂಗವಾಗಿ) ತಾಯಿಯ ಹೆಸರಿನಲ್ಲಿ ಒಂದು ಮರ ಕಾರ್ಯಕ್ರಮದಡಿ ರಾಯಚೂರು ಭಾರತ ವನ ಯೋಜನೆಗೆ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ಸಸಿಗಳನ್ನು ನೆಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ವಿದ್ಯಾರ್ಥಿಗಳೊಂದಿಗೆ ಗಿಡಮರಗಳ ನೆಡುವುದರ ಮಹತ್ವ ಕುರಿತು ಸಂವಾದ ನಡೆಸಿದರು.

ಈ ವೇಳೆ ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ಮಾತನಾಡಿ, ರಾಯಚೂರು ಹಾಗೂ ಯಾದಗಿರಿ ಜಿಲ್ಲೆಯ ಮಹತ್ವಾಕಾಂಕ್ಷೆ ಜಿಲ್ಲೆಯ ಪ್ರಗತಿ ಪರಿಶೀಲನೆ ಸಭೆಯನ್ನು ಹಣಕಾಸು ಸಚಿವರು ನಡೆಸಿದ್ದಾರೆ. ಮುಂದಿನ ದಿನಗಳಲ್ಲಿ ರಾಯಚೂರು ಜಿಲ್ಲೆಯು ಮಹತ್ವಾಕಾಂಕ್ಷೆ ಜಿಲ್ಲೆಯ ಪಟ್ಟಿಯಿಂದ ಆದಷ್ಟು ಬೇಗನೆ ಹೊರ ಬರಲಿದೆ ಎಂದರು. ಭಾರತ ವನ ಯೋಜನೆಯಡಿ ಒಟ್ಟು 60,000 ಸ್ಥಳೀಯ ಜಾತಿಯ ಸಸಿಗಳನ್ನು ನೆಡಲಾಗುತ್ತಿದೆ. ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ 10,000 ಸಸಿಗಳು ಹಾಗೂ ರಾಯಚೂರು ಮಹಾನಗರ ಪಾಲಿಕೆಯ ಘನ ತ್ಯಾಜ್ಯ ನಿರ್ವಹಣಾ ಘಟಕ ಪ್ರದೇಶದಲ್ಲಿ 50,000 ಸಸಿಗಳನ್ನು ನೆಡಲಾಗುತ್ತದೆ ಎಂದರು.

ಪರಿಸರ ಸಮತೋಲನವನ್ನು ಕಾಪಾಡಲು ಒಟ್ಟು ಭೌಗೋಳಿಕ ವಿಸ್ತೀರ್ಣದ ಕನಿಷ್ಠ 30 ಶೇಕಡಾ ಭಾಗ ಅರಣ್ಯಾವರಣ ಹೊಂದಿರಬೇಕೆಂಬ ರಾಷ್ಟ್ರೀಯ ಗುರಿ ಇದ್ದರೂ, ರಾಯಚೂರು ಜಿಲ್ಲೆಯ ಅರಣ್ಯಾವರಣವು 2 ಶೇಕಡಾಕ್ಕಿಂತಲೂ ಕಡಿಮೆ ಇದೆ. ಇದರ ಪರಿಣಾಮವಾಗಿ ಭೂಮಿಯ ಉಷ್ಣತೆ ಹೆಚ್ಚಳ, ಮಣ್ಣಿನ ಫಲವತ್ತತೆ ಕುಸಿತ, ಭೂಗರ್ಭ ಜಲಮಟ್ಟ ಇಳಿಕೆ, ಜೀವ ವೈವಿಧ್ಯತೆಯ ನಷ್ಟ ಹಾಗೂ ಹವಾಮಾನ ವೈಪರೀತ್ಯಗಳಂತಹ ಸಮಸ್ಯೆಗಳು ಹೆಚ್ಚಾಗುತ್ತಿವೆ. ಈ ಹಿನ್ನೆಲೆಯಲ್ಲಿ ಭಾರತ ವನ








ಯೋಜನೆ ರಾಯಚೂರು ಜಿಲ್ಲೆಯ ಪರಿಸರ ಭವಿಷ್ಯಕ್ಕೆ ಹೊಸ ಆಶಾಕಿರಣವಾಗಲಿದೆ ಎಂದರು.

ಇದೇ ಸಂದರ್ಭದಲ್ಲಿ ಗ್ರೀನ್ ಹೀರೋ ಆಫ್ ಇಂಡಿಯಾದ ಡಾ.ರಾಧಕೃಷ್ಣ ನಾಯರ್, ಹಣಕಾಸು ಸಚಿವಾಲಯದ ಕಾರ್ಯದರ್ಶಿ ಸಂಜಯ್ ಲೋಹಿಯಾ, ಆಪ್ತ ಕಾರ್ಯದರ್ಶಿ ಅನಿರುದ್ಧ ಶ್ರವಣ್, ರಾಷ್ಟ್ರೀಯ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್ ಅಧ್ಯಕ್ಷ ಶಾಜಿ ಕೃಷ್ಣನ್, ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಕಾರ್ಯದರ್ಶಿ ನಲಿನ್ ಅತುಲ್. ಜಿಲ್ಲಾಧಿಕಾರಿ ಪೂವಿತಾ ಎಸ್., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್ ಕಾಂದೂ, ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತ ಜುಬಿನ್ ಮೊಹೊಪಾತ್ರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಶು ಗಿರಿ. ರಾಯಚೂರು ಸಹಾಯಕ ಆಯುಕ್ತ ಡಾ.ಹಂಪಣ್ಣ ಸಜ್ಜನ್, ರಾಯಚೂರು ತಹಶಿಲ್ದಾರ್ ಸುರೇಶ್ ವರ್ಮಾ ಸೇರಿದಂತೆ ಇತರೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

ಸಿಂಧನೂರು ವಿಶೇಷ ಭೂ ಸ್ವಾಧೀನ ಅಧಿಕಾರಿ ಶೃತಿ ಅವರು ಕಾರ್ಯಕ್ರಮದ ನಿರೂಪಣೆ ಮಾಡಿದರು.

## ರಸ್ತೆ ಅಪಘಾತದಲ್ಲಿ ಇಬ್ಬರ ಸಾವು ಹಲವರಿಗೆ ಗಾಯ



ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ರಾಯಚೂರು ಸಿಂಧನೂರು ರಸ್ತೆಯಲ್ಲಿನ ಸೂರ್ಯ ಫಂಕ್ಷನ್ ಹಾಲ್ ಹತ್ತಿರ ಗುರುವಾರ ಮಧ್ಯಾಹ್ನ ನಡೆದ ರಸ್ತೆ ಅಪಘಾತದಲ್ಲಿ ಕಾರಿನಲ್ಲಿದ್ದ ಹುನುಗುಂದ ತಾಲೂಕಿನ ಸೂಳೆಬಾವಿ ಗ್ರಾಮದ ಸೇರಿದ ಇಬ್ಬರು ಸ್ಥಳದಲ್ಲಿಯೇ ಮೃತಪಟ್ಟ ಘಟನೆ ನಡೆದಿದ್ದು ಗಾಯಾಳುಗಳನ್ನು ಸರಕಾರಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ.

ಬಾಗಲಕೋಟೆಯ ಕುಟುಂಬವೊಂದು ಮಂತ್ರಾಲಯದಲ್ಲಿನ ಶ್ರೀ ರಾಘವೇಂದ್ರ ಸ್ವಾಮಿಗಳ ಮಠಕ್ಕೆ ತೆರಳಿ ಶ್ರೀ ರಾಘವೇಂದ್ರ ಸ್ವಾಮಿಗಳ ದರ್ಶನ ಪಡೆದು ಮರಳಿ ಬಾಗಲಕೋಟೆಗೆ ಕಾರಿನಲ್ಲಿ ತೆರಳುತ್ತಿದ್ದ ಸಮಯದಲ್ಲಿ ಮಾನ್ವಿ ಮುಖ್ಯ ರಸ್ತೆ ಬದಿಯಲ್ಲಿ ನಿಂತಿದ ಲಾರಿಯೊಂದಕ್ಕೆ ಕಾರು ಚಾಲನೆ ಮಾಡುತ್ತಿದ್ದ ರಾಘವೇಂದ್ರ ತಂದೆ ನಾಗಪ್ಪ 26 ವರ್ಷ ಇಲಕಲ್ ಡಿಕ್ಕಿ ಹೊಡೆದಿದ್ದಾರಿಂದ ಸ್ಥಳದಲ್ಲಿಯೇ ಮೃತಪಟ್ಟಿದು , ಮುಂದಿನ ಆಸನದಲ್ಲಿ ಕುಳಿತಿದ್ದ ಒಂದೆ ಕುಟುಂಬದ ಪ್ರಿಯಾಂಕ 19 ವರ್ಷ ಸ್ಥಳದಲ್ಲಿಯೇ ಮೃತಪಟ್ಟರೆ ಕಾರು ಹಿಂಬದಿಯ ಆಸನದಲ್ಲಿ ಕುಳಿತಿದ್ದ ಕಾಳಮ್ಮ, ಕವಿತಾ ಎನ್ನುವವರಿಗೆ ಗಂಭಿರವಾದ ತೀವ್ರಗಾಯಗಳಾಗಿವೆ. ಮೂವರು ಮಕ್ಕಳಾದ ಸೌಮ್ಯ 14 ವರ್ಷ ,ವಿಜಯ 3 ವರ್ಷ ,ಮಧು 9 ವರ್ಷ ಎನ್ನುವವರಿಗೆ ಸ್ವಲ್ಪ ಗಾಯಗಳಾಗಿವೆ. ಸ್ಥಳಕ್ಕೆ ಆಗಮಿಸಿದ ಮಾನ್ವಿ ಪೊಲೀಸ್ ಠಾಣೆಯ ಪಿ.ಐ.ಸೋಮಶೇಖರ ಎಸ್.ಕೆಂಚರೆಡ್ಡಿ ಗಾಯಳುಗಳನ್ನು ಚಿಕಿತ್ಸೆಗಾಗಿ ಕೂಡಲೇ ಆಸ್ಪತ್ರೆಗೆ ಕಳುಹಿಸಿ ಹೆಚ್ಚಿನ ತನಿಖೆ ಕೈಗೊಂಡಿದ್ದಾರೆ.

## ನೂತನ ಜಿಲ್ಲಾಧ್ಯಕ್ಷರು ಹಾಗೂ ಪದಾಧಿಕಾರಿಗಳಿಗೆ ಸಿರವಾರ GPT ಶಿಕ್ಷಕರ ಸಂಘದಿಂದ ಸನ್ಮಾನ









ಧೈರ್ಯದ ದಾರಿ

**ಸಿರವಾರ, ಜೂನ್ 4:** ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ನೂತನ ಜಿಲ್ಲಾಧ್ಯಕ್ಷರು ಹಾಗೂ ತಾಲೂಕು ಪದಾಧಿಕಾರಿಗಳಿಗೆ ಸಿರವಾರ ತಾಲೂಕಿನ GPT ಶಿಕ್ಷಕರ ಸಂಘದ ವತಿಯಿಂದ ಗುರುವಾರ ಸಂಜೆ ಸರಕಾರಿ ನೌಕರರ ಭವನದಲ್ಲಿ ಸನ್ಮಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಇತ್ತೀಚೆಗೆ ಅವಿರೋಧವಾಗಿ ಜಿಲ್ಲಾಧ್ಯಕ್ಷರಾಗಿ ಆಯ್ಕೆಯಾದ ಶ್ರೀ ಸುರೇಶ್ ಕುರ್ಡಿ, ತಾಲೂಕು ಅಧ್ಯಕ್ಷರಾದ ಶ್ರೀ ಸಬ್ಜಲಿ, ಪ್ರಧಾನ ಕಾರ್ಯದರ್ಶಿಯಾದ ಶ್ರೀ ಮಲ್ಲಿಕಾರ್ಜುನ ಹಾಗೂ ಖಜಾಂಚಿಯಾಗಿ ಆಯ್ಕೆಯಾದ ಶ್ರೀಮತಿ ಮಮತಾ ಎಸ್.ಎಂ. ಅವರನ್ನು ಸಿರವಾರ ಉಕಖಿ ಶಿಕ್ಷಕರ ಸಂಘದ ಅಧ್ಯಕ್ಷರಾದ ಹೆಚ್.ಎಂ. ಇಶಾಕ್ ಅವರು ತಮ್ಮ ಪದಾಧಿಕಾರಿಗಳೊಂದಿಗೆ ಸನ್ಮಾನಿಸಿ ಅಭಿನಂದಿಸಿದರು.

ಕಾರ್ಯಕ್ರಮದಲ್ಲಿ ಪ್ರಾಸ್ತಾವಿಕವಾಗಿ ಮಾತನಾಡಿದ ಹೆಚ್.ಎಂ. ಇಶಾಕ್ ಅವರು, ಶಿಕ್ಷಕರ ಸಂಘಟನೆಗಳು ಶಿಕ್ಷಕರ ಹಿತಾಸಕ್ತಿ ಕಾಪಾಡುವಲ್ಲಿ ಪ್ರಮುಖ ಪಾತ್ರ ವಹಿಸುತ್ತಿದ್ದು, ನೂತನ ಪದಾಧಿಕಾರಿಗಳು ಶಿಕ್ಷಕರ ಸಮಸ್ಯೆಗಳ ಪರಿಹಾರಕ್ಕೆ ಶ್ರಮಿಸಲಿ ಎಂದು ಶುಭ ಹಾರೈಸಿದರು.

ಕಾರ್ಯಕ್ರಮದಲ್ಲಿ ಪ್ರೌಢಶಾಲಾ ಶಿಕ್ಷಕರಾದ ಸಂಜೀವಪ್ಪ ಸರ್, ಮಹಿಬೂಬ್ ಸರ್, ಸುರೇಶ್ ಸರ್, ದೇವಪ್ಪ ಸರ್ ಉಪಸ್ಥಿತರಿದ್ದರು. ಮುಖ್ಯ ಗುರುಗಳಾದ ತಿರುಮಲ ಯಾದವ್ ಸರ್, ಈಶಪ್ಪ ಸರ್, ನಾರಾಯಣ ಸರ್ ಹಾಗೂ ನರಸಿಂಹ ಸರ್ ಭಾಗವಹಿಸಿದ್ದರು.
ಜಿಪಿಟಿ ಶಿಕ್ಷಕರಾದ ಮಹಿಬೂಬ್ ಸರ್, ಮೌನೇಶ್ ಸರ್, ಕಾಡಪ್ಪ ಸರ್, ಕಾಶಿನಾಥ್ ಸರ್, ಸೀನಪ್ಪ ಸರ್, ಸುರೇಶ್ ಪಾಟೀಲ್ ಸರ್, ಅಜಯ್ ಸರ್, ದತ್ತಪ್ಪ ಸರ್ ಸೇರಿದಂತೆ ಅನೇಕ ಶಿಕ್ಷಕರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು. ಹಿರಿಯ ಶಿಕ್ಷಕರಾದ ಮೂಕಪ್ಪ ಕಟ್ಟಿಮನಿ ಸರ್ ಹಾಗೂ ಸುರೇಶ್ ಮರ್ಕಮದಿನ್ನಿ ಅವರು ಸಹ ಉಪಸ್ಥಿತರಿದ್ದು ನೂತನ ಪದಾಧಿಕಾರಿಗಳಿಗೆ ಶುಭಾಶಯ ಕೋರಿದರು.

ಕಾರ್ಯಕ್ರಮವು ಶಿಕ್ಷಕರ ಸಂಘಟನೆಯ ಏಕತೆ, ಸಹಕಾರ ಹಾಗೂ ಪರಸ್ಪರ ಗೌರವದ ಸಂಕೇತವಾಗಿ ಯಶಸ್ವಿಯಾಗಿ ನಡೆಯಿತು.

## ನಾಲ್ವಡಿ ಕೃಷ್ಣರಾಜ ಒಡೆಯರ ಕಾಲ ಅಭಿವೃದ್ಧಿಯ ಪರ್ವ: ಡಾ. ಬಿರಾದಾರ

ಧೈರ್ಯದ ದಾರಿ



ನಾಲ್ವಡಿ ಕೃಷ್ಣರಾಜ ಒಡೆಯರ ಮೈಸೂರು ಸಂಸ್ಥಾಪನದ ಅತ್ಯಂತ ಪ್ರಸಿದ್ಧ ಹಾಗೂ ಪ್ರಜಾಪ್ರಿಯ ರಾಜರಲ್ಲಿ ಒಬ್ಬರು .1894 ರಿಂದ 1940 ವರೆಗೆ ಮೈಸೂರು ರಾಜ್ಯವನ್ನು ಆಡಳಿತ ನಡೆಸಿದರು. ಅವರ ಕಾಲವನ್ನು ಮೈಸೂರು ರಾಜ್ಯದ ಸುವರ್ಣ ಯುಗ ಎಂದು ಕರೆಯಲಾಗುತ್ತದೆ. 1.907 ರಲ್ಲಿ ಮೈಸೂರು ವಿಧಾನಸಭೆಯ ಪರಿಕಲ್ಪನೆಯ ಸ್ಥಾಪನೆ .1916 ರಲ್ಲಿ ಮೈಸೂರು ವಿಶ್ವವಿದ್ಯಾಲಯ ಸ್ಥಾಪನೆ ಯುವರಾಜ್ ಕಾಲೇಜು ಸೈನ್ಸ್ ಕಾಲೇಜು ಪ್ರಾರಂಭ .ಮೈಸೂರು ಸ್ಯಾಂಡಲ್ ಆಯಿಲ್ ಫ್ಯಾಕ್ಟರಿ .ಭದ್ರಾವತಿ ಐರನ್ ಅಂಡ್ ಸ್ಟೀಲ್ .ಚಾಮರಾಜನಗರ ಪೇಪರ್ ಮಿಲ್ಸ್ ಜೊತೆಗೆ ಸರ್ ಎಂ ವಿಶ್ವೇಶ್ವರಯ್ಯನವರ ಸರ್ಕಾರ. ಮಾರ್ಗದರ್ಶನದಲ್ಲಿ ಕನ್ನಂಬಾಡಿ ಅಣೆಕಟ್ಟು ನಿರ್ಮಾಣದ ಯೋಜನೆ. ಮೈಸೂರು ಮತ್ತು ಬೆಂಗಳೂರು ನಗರ ಗಳ ಆದುಕರಣ ರಸ್ತೆ .ರೈಲು ಮಾರ್ಗ ಮತ್ತು ನೀರು ಪೂರೈಕೆಗಳ ವ್ಯವಸ್ಥೆಯಲ್ಲಿ ಸುಧಾರಣೆ .ಮಾರಿ ಕಣಿವೆ ಜಲಾಶಯ ನಿರ್ಮಾಣ .ಶಿವನ ಸಮುದ್ರದಲ್ಲಿ ಜಲ ವಿದ್ಯುತ್ ಉತ್ಪಾದನೆ, ಕೋಲಾರದ ಚೆನ್ನಗಣಿ ಮತ್ತು ಬೆಂಗಳೂರಿಗೆ ವಿದ್ಯುತ್ ಸರಬರಾಜು .ಸಕ್ಕರೆ ಕಾರ್ಖಾನೆ ಮೈಸೂರು ಗಂಧದ ಎಣ್ಣೆ ಕಾರ್ಖಾನೆ .ಹಿಗೆ ಹತ್ತು.ಹಲವಾರು ಸಾಮಾಜಿಕ ಜನಸೇವೆ ಕಾರ್ಯವನ್ನು ಮಾಡಿದ ನಾಲ್ವಡಿ ಕೃಷ್ಣರಾಜ ಒಡೆಯರ್ ಅಧಿಕಾರದ ಕಾಲ ಅಭಿವೃದ್ಧಿ ಪರ್ವ. ಜೊತೆಗೆ ಕನ್ನಡ ನಾಡು ನುಡಿ ಜಲ ಇವುಗಳ ರಕ್ಷಣೆಗಾಗಿ ಕನ್ನಡ ಸಾಹಿತ್ಯ ಪರಿಷತ್ ಸ್ಥಾಪನೆ ಮಾಡಿ ಹಲವಾರು ಕನ್ನಡ ಕಾರ್ಯಕ್ರಮಗಳನ್ನು ಮಾಡಿದ ಕೀರ್ತಿ ನಾಲ್ವಡಿ ಕೃಷ್ಣರಾಜ ಒಡೆಯರಿಗೆ ಸಲ್ಲುತ್ತದೆ .ಮಹಾತ್ಮ ಗಾಂಧೀಜಿ ಇವರನ್ನು ರಾಜರ್ಸಿ ನಾಲ್ವಡಿ ಕೃಷ್ಣರಾಜ ಒಡೆಯರ್ ಎಂದು ಕರೆಯಲ್ಪಟ್ಟಿದ್ದಾರೆ. ಎಂದು ರಾಯಚೂರು ನಗರದ ಸಾರ್ವಜನಿಕ ಗ್ರಂಥಾಲಯ ಹತ್ತಿರ ಇರುವ ಓಂ ಸಾಯಿ ದ್ಯಾನ 2ನೇ ಪುಟಕ್ಕೆ

## ನಾಲ್ವಡಿ ಕೃಷ್ಣರಾಜ ಒಡೆಯರ್ 142 ನೇ ಜಯಂತಿ

ಧೈರ್ಯದ ದಾರಿ



**ಮಾನ್ವಿ:** ಕನ್ನಡ ಸಾಹಿತ್ಯ ಪರಿಷತ್ತು ಸ್ಥಾಪನೆ ಮಾಡಿದ ಮೈಸೂರು ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಕನ್ನಡ ನಾಡು-ನುಡಿ, ಸಾಹಿತ್ಯಕ್ಕೆ ನೀಡಿದ ಸೇವೆ ಅಪಾರವಾದದ್ದು ಎಂದು ತಾಲೂಕು ಕಸಾಪ ಸಮ್ಮೇಳನದ ಕೋಶಾಧ್ಯಕ್ಷ ಹೆಚ್. ಶಫುದ್ದೀನ್ ಪೋತ್ನಾಳ ಹೇಳಿದರು.
ಪಟ್ಟಣದ ಕನ್ನಡ ಭವನದಲ್ಲಿ ಗುರುವಾರ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ಹಮ್ಮಿಕೊಂಡ ಮಹಾರಾಜ ನಾಲ್ವಡಿ ಕೃಷ್ಣರಾಜ ಒಡೆಯರ್ 142 ನೇ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದರು. 1915 ರಲ್ಲಿ ಸ್ಥಾಪನೆಯಾದಾಗ ಇದಕ್ಕೆ ಕರ್ನಾಟಕ ಸಾಹಿತ್ಯ ಪರಿಷತ್ತು ಎಂದು ಹೆಸರಿಡಲಾಗಿತ್ತು. ನಂತರ ಕನ್ನಡ ಸಾಹಿತ್ಯ ಪರಿಷತ್ತು ಆಗಿದೆ. ರಾಜರ ಜನಪರ ಹಾಗೂ ಪ್ರಗತಿಪರ ಆಡಳಿತವನ್ನು ಕಂಡು ಮಹಾತ್ಮ ಗಾಂಧಿ ಅವರು ನಾಲ್ವಡಿ ಕೃಷ್ಣರಾಜ ಒಡೆಯರ್ ಅವರನ್ನು ರಾಜರ್ಷಿ ಎಂದು ಗೌರವದಿಂದ ಕರೆದರು ಎಂದರು.

ತಾಲೂಕು ಕಸಾಪ ಮಾಜಿ ಅಧ್ಯಕ್ಷ ಮುಕಪ್ಪ ಕಟ್ಟಿಮನಿ ಮಾತನಾಡಿ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ದೂರದೃಷ್ಟಿಯ ನಾಯಕತ್ವ, ಜನಪರ ಆಡಳಿತ ಮತ್ತು ಅಭಿವೃದ್ಧಿ ಕಾರ್ಯಗಳಿಂದ ಮೈಸೂರು ಸಂಸ್ಥಾನವು ದೇಶದ ಅತ್ಯುತ್ತಮ ಮಾದರಿ ರಾಜ್ಯಗಳಲ್ಲಿ ಒಂದಾಗಿ ರೂಪುಗೊಂಡಿವೆ ಎಂದರು.

ತಾಲೂಕು ಕಸಾಪ ಅಧ್ಯಕ್ಷ ಶರಣಬಸವ ನೀರಮಾನ್ವಿ, ಗೌರವ ಕಾರ್ಯದರ್ಶಿಗಳಾದ ಲಕ್ಷ್ಮಣ ಜಾನೇಕಲ್, ಬಾಲಾಜಿಸಿಂಗ್, ಸಂಘಟನಾ ಕಾರ್ಯದರ್ಶಿಗಳಾದ ರವಿಶರ್ಮ, ಆಂಜನೇಯ್ಯ ನಾಯಕ ನೀರಮಾನ್ವಿ, ಶ್ರೀಕಾಂತ ಗೂಳಿ, ಜಗನ್ನಾಥ ಚೌದರಿ, ಮಹಾಂತೇಶ ಗವಿಗಟ್ಟು ಇನ್ನಿತರರು ಇದ್ದರು.

## ನಾರದಗಡ್ಡೆಗೆ ಜಿಲ್ಲಾಧಿಕಾರಿ ಪೂವಿತಾ ಎಸ್. ಭೇಟಿ

ಧೈರ್ಯದ ದಾರಿ

**ರಾಯಚೂರು ಜೂನ್ 04:** ರಾಯಚೂರು ಜಿಲ್ಲಾ ಕೇಂದ್ರದಿಂದ ಸುಮಾರು 35 ಕಿ.ಮೀ. ದೂರದಲ್ಲಿರುವ ಐತಿಹಾಸಿಕ, ಪೌರಾಣಿಕ ಮತ್ತು ಪ್ರಾಕೃತಿಕ ಮಹತ್ವ ಹೊಂದಿರುವ ನಾರದಗಡ್ಡೆಗೆ ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ಜೂನ್ 03ರ ಬುಧವಾರ ದಂದು ಭೇಟಿ ನೀಡಿದರು.
ಈ ವೇಳೆ ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ಮಾತನಾಡಿ, ನಾರದಗಡ್ಡೆಯು ಪ್ರಾಕೃತಿಕ 2ನೇಪುಟಕ್ಕೆ



ಮೊದಲನೇ ಪುಟದಿಂದ

# ನಾಲ್ವಡಿ ಕೃಷ್ಣರಾಜ ಒಡೆಯರ ಕಾಲ ಅಭಿವೃದ್ಧಿಯ ಪರ್ವ: ಡಾ. ಬಿರಾದಾರ

ಮಂದಿರದಲ್ಲಿ ನಾಲ್ವಡಿ ಕೃಷ್ಣರಾಜ ಒಡೆಯರ ಜಯಂತಿಯ ಕಾರ್ಯಕ್ರಮದಲ್ಲಿ ಭಾವಚಿತ್ರಕ್ಕೆ ಮಾಲಾರ್ಪಣೆ ಮತ್ತು ಪುಷ್ಪಾರ್ಪಣೆಯ ನಂತರ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾ ಸಹ ಕಾದರ್ಶಿಯಾದ ಡಾ. ದಂಡಪ್ಪ ಬಿರಾದಾರ ಮಾತನಾಡಿದರು .ಓಂ ಸಾಯಿ ಮಂದಿರದ ಧರ್ಮಾಧಿಕಾರಿಗಳು. ಸಾಯಿ ಕಿರಣ ಆದೋನಿ ಗುರೂಜಿಯವರು ಮಾತನಾಡುತ್ತಾ .ಈಗಾಗಲೇ ನಾಲ್ವಡಿ ಕೃಷ್ಣರಾಜ ಒಡೆಯರ ಬಗ್ಗೆ ಅವರ ಸಾಧನೆಯ ಬಗ್ಗೆ ಅವರ ಕಾರ್ಯಗಳ ಬಗ್ಗೆ ಅವರ ಅಭಿವೃದ್ಧಿ ಕೆಲಸಗಳ ಬಗ್ಗೆ ಬಿರಾದಾರ ಗುರುಗಳು ಅಚ್ಚುಕಟ್ಟಾಗಿ ತಮಗೆ ತಿಳಿಸಿದ್ದಾರೆ .ವಿಶೇಷವಾಗಿ ಈ ಕನ್ನಡ ಸಾಹಿತ್ಯ ಪರಿಷತ್ತಿನ ಸಂಸ್ಥಾಪನೆಯಲ್ಲಿ ಪ್ರಮುಖ ಪಾತ್ರವಹಿಸಿದ್ದು .ನಮ್ಮ ಕನ್ನಡಿಗರಿಗೆ ಹೆಮ್ಮೆಯ ವಿಷಯವಾಗಿದೆ ಎಂದು ಹೇಳಿದರು .ಈ ಸಂದರ್ಭದಲ್ಲಿ ರವಿ ನಾಯಕ .ಸುಹಾಸಿನಿ .ಶೋಭಾ ಪಾಟೀಲ್ ಶಂಕರ್. ಶಶಿಧರ ಇನಾಮ್ದಾರ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ನಾರದಗಡ್ಡೆಗೆ ಜಿಲ್ಲಾಧಿಕಾರಿ ಪೂವಿತಾ ಎಸ್. ಭೇಟಿ

ಮಹತ್ವ ಹೊಂದಿರುವ ವಿಶಿಷ್ಟ ತಾಣವಾಗಿದೆ. ಇಲ್ಲಿ ಇರುವ ಶ್ರೀ ಚನ್ನಬಸವೇಶ್ವರ ದೇವಸ್ಥಾನ, ನಾರದ ಮುನಿಗಳು ತಪಸ್ಸು ಮಾಡಿದ ನೆಲವೆಂಬ ನಂಬಿಕೆಗೆ ಸಾಕ್ಷಿಯಂತೆ ಉಳಿದಿದೆ. ಈ ಸ್ಥಳಕ್ಕೆ ಕರ್ನಾಟಕ, ಮಹಾರಾಷ್ಟ್ರ, ಆಂಧ್ರಪ್ರದೇಶ, ತೆಲಂಗಾಣ ಮತ್ತು ಗೋವಾದ ಪ್ರವಾಸಿಗರು ನಾರದಗಡ್ಡೆಗೆ ಭೇಟಿ ನೀಡುತ್ತಾರೆ. ನಾರದಗಡ್ಡೆಯಲ್ಲಿ ಅಗತ್ಯ ಮೂಲಭೂತು ಸೌಕರ್ಯಗಳನ್ನು ಒದಗಿಸಲು ಅಗತ್ಯ ಕ್ರಮವಹಿಸುವಂತೆ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸ್ಥಳದಲ್ಲೇ ಸೂಚಿಸಿದರು.
ನಾರದಗಡ್ಡೆಯ ಬ್ರೀಜ್ ನಿಂದ ಕುರುವಕೂಲ ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ರಸ್ತೆಯನ್ನು ಕೂಡಲೇ ಸುಧಾರಿಸಬೇಕು. ಅಲ್ಲದೆ ನಾರದಗಡ್ಡೆಯಲ್ಲಿ ಇರುವ ಹಳೆ ಬಿಲ್ಡಿಂಗ್ ತೆರವುಗೊಳಿಸಿ, ಹೊಸ ಬಿಲ್ಡಿಂಗ್ ನಿರ್ಮಾಣ ಮಾಡಲು ಅಗತ್ಯ ಕ್ರಮವಹಿಸುವಂತೆ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.
ಇದೇ ಸಂದರ್ಭದಲ್ಲಿ ರಾಯಚೂರು ಸಹಾಯಕ ಆಯುಕ್ತ ಡಾ.ಹಂಪಣ್ಣ ಸಜ್ಜನ್, ರಾಯಚೂರು ತಹಶೀಲ್ದಾರ್ ಸುರೇಶ ವರ್ಮಾ, ರಾಯಚೂರು ಸಿಪಿಐ ನಿಂಗಪ್ಪ, ಲೋಕೋಪಯೋಗಿ ಇಲಾಖೆಯ ಇಇ ವೆಂಕಟೇಶ ಗಲಗ ಸೇರಿದಂತೆ ವಿವಿಧ ಅಧಿಕಾರಿಗಳು, ಸಿಬ್ಬಂದಿಗಳು, ಸಾರ್ವಜನಿಕರು ಇದ್ದರು.

# ಭ್ರಷ್ಟಾಚಾರಕ್ಕೆ ಬ್ರೇಕ್: ಅಧಿಕಾರಿಗಳಿಗೆ ಸಿಎಂ ಡಿ.ಕೆ. ಶಿವಕುಮಾರ್ ಖಡಕ್ ಎಚ್ಚರಿಕೆ

**ಬೆಂಗಳೂರು, ಜೂ. 4–** ರಾಜ್ಯದ ಮುಖ್ಯಮಂತ್ರಿಯಾಗಿ ಆಡಳಿತ ಚುಕ್ಕಾಣಿ ಹಿಡಿದಿರುವ ಡಿ.ಕೆ. ಶಿವಕುಮಾರ್ ಅವರು ಆಡಳಿತ ಯಂತ್ರವನ್ನು ಚುರುಕುಗೊಳಿಸಲು ಇಂದು ಹಿರಿಯ ಅಧಿಕಾರಿಗಳ ಸಭೆ ನಡೆಸಿ, ಸರ್ಕಾರದ ಯೋಜನೆಗಳ ಜಾರಿಗೆ ಸಮರ್ಪಣಾ ಭಾವದಿಂದ ಕೆಲಸ ಮಾಡುವಂತೆ ತಾಕೀತು ಮಾಡಿ, ಭ್ರಷ್ಟಾಚಾರಕ್ಕೆ ಕಡಿವಾಣ ಹಾಕಿ ಎಂದು ಕಟ್ಟಾಜ್ಞೆ ಮಾಡಿದ್ದಾರೆ.



ವಿಧಾನಸೌಧದ ಮೂರನೇ ಮಹಡಿಯಲ್ಲಿರುವ ಸಮ್ಮೇಳನ ಸಭಾಂಗಣದಲ್ಲಿಂದು ಉಪಮುಖ್ಯಮಂತ್ರಿ ಡಾ.ಜಿ. ಪರಮೇಶ್ವರ್ ರವರ ಜತೆಗೂಡಿ ರಾಜ್ಯದ ಮುಖ್ಯ ಕಾರ್ಯದರ್ಶಿಗಳು ಸೇರಿದಂತೆ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಗಳು, ವಿವಿಧ ಇಲಾಖೆಗಳ ಪ್ರಧಾನ ಕಾರ್ಯದರ್ಶಿಗಳು, ಕಾರ್ಯದರ್ಶಿಗಳ ಸಭೆ ನಡೆಸಿದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು, ಯೋಜನೆಗಳ ವಿಚಾರದಲ್ಲಿ ಅಧಿಕಾರಿಗಳ ನಿರ್ಲಕ್ಷ್ಯವನ್ನು ಸಹಿಸಲ್ಲ. ರಾಜ್ಯ ಸರ್ಕಾರ ಘೋಷಿಸಿರುವ ಯೋಜನೆಗಳನ್ನು ಸಮರ್ಪಕವಾಗಿ ಜಾರಿ ಮಾಡುವತ್ತ ಗಮನ ಕೊಡಿ ಎಂದು ಅಧಿಕಾರಿಗಳಿಗೆ ತಾಕೀತು ಮಾಡಿದರು

ಸರ್ಕಾರದ ಮಟ್ಟದಲ್ಲಿ ಯಾವುದೇ ಕಾರಣಕ್ಕೂ ಭ್ರಷ್ಟಾಚಾರಕ್ಕೆ ಆಸ್ಪದ ಕೊಡಬೇಡಿ. ಭ್ರಷ್ಟಾಚಾರವನ್ನು ನಿಯಂತ್ರಿಸಿ ಕಡಿವಾಣ ಹಾಕಿ ಎಂದು ನಿರ್ದೇಶನ ನೀಡಿದರು.

ಸರ್ಕಾರದ ಸುಗಮ ಆಡಳಿತಕ್ಕೆ ಅಧಿಕಾರಿಗಳೆ ಬೆನ್ನೆಲುಬು. ಸಾರ್ವಜನಿಕರ ಕಷ್ಟಗಳಿಗೆ ತಕ್ಷಣ ಸ್ಪಂದಿಸಿ ಸರ್ಕಾರದ ಜನ ಕಲ್ಯಾಣ ಯೋಜನೆಗಳನ್ನು ಸಮರ್ಥವಾಗಿ ಜನರಿಗೆ ತಲುಪಿಸಿ ಅಭಿವೃದ್ಧಿ ಹಾದಿಗೆ ಮೆಟ್ಟಿಲಾಗಿ. ಜನ ಮೆಚ್ಚುವ ಹಾಗೆ ಕೆಲಸ ಮಾಡಿ ಸರ್ಕಾರಕ್ಕೆ ಒಳ್ಳೆಯ ಹೆಸರು ತನ್ನಿ, ನೀವು ಒಳ್ಳೆಯ ಹೆಸರು ಮಾಡಿ ಎಂದು ಕರೆ ನೀಡಿದರು.

ತಮ್ಮ ನೇತೃತ್ವದಲ್ಲಿ ನಿನ್ನೆ ಅಸ್ತಿತ್ವಕ್ಕೆ ಬಂದಿರುವ ಸರ್ಕಾರ ಚೊಚ್ಚಲ ಸಚಿವ ಸಂಪುಟ ಸಭೆಯಲ್ಲಿ ವಿದ್ಯಾರ್ಥಿಗಳಿಗೆ ಉಚಿತ ಬಸ್‌ಪಾಸ್ ಸೇರಿದಂತೆ ಆರು ಯೋಜನೆಗಳನ್ನು ಘೋಷಣೆ ಮಾಡಿದೆ. ಈ ಯೋಜನೆಗಳ ಶೀಘ್ರ ಅನುಷ್ಠಾನಕ್ಕೆ ಬದ್ಧರಾಗಿ ಕೆಲಸ ಮಾಡಿ ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಕಾನೂನು ಬಾಹಿರ ಚಟುವಟಿಕೆಗಳನ್ನು ತಡೆಗಟ್ಟಿ ರೌಡಿ ಎಡೆಮುರಿಕಟ್ಟಿ ಜೂಜು, ಡ್ರಗ್ಸ್ ದಂಧೆಗೆ ಆಸ್ಪದ ಕೊಡಬೇಡಿ ಶಾಂತಿ, ನೆಮ್ಮದಿ ಕಾಪಾಡಿ ಎಂದು ಸಭೆಯಲ್ಲಿದ್ದ ಪೊಲೀಸ್ ಹಿರಿಯ ಅಧಿಕಾರಿಗಳಿಗೂ ಸೂಚಿಸಿದರು.

ಜನಸ್ಪಂದನ ಜಾರಿ: ಸರ್ಕಾರ ಜನರ ಮನೆ ಬಾಗಿಲಿಗೆ ಹೋಗಬೇಕು. ಜನರು ಸರ್ಕಾರಿ ಕಚೇರಿಗಳಿಗೆ ಅಲೆಯವುದನ್ನು ತಪ್ಪಿಸಬೇಕು ಹಾಗಾಗಿ ಜನಸ್ಪಂದನ ಕಾರ್ಯಕ್ರಮವನ್ನು ಜಾರಿ ಮಾಡುತ್ತೇನೆ. ಅಧಿಕಾರಿಗಳು ಪ್ರತಿಜಿಲ್ಲೆಗಳಿಗೂ ಹೋಗಿ ಭೇಟಿ ನೀಡಿ, ಯೋಜನೆಗಳ ಪ್ರಗತಿ ಪರಿಶೀಲಿಸಬೇಕು ಎಂದು ಸೂಚಿಸಿದರು

ಅಧಿಕಾರಿಗಳು ಜನಪರ ಕೆಲಸ ಮಾಡಿದರೆ ಸರ್ಕಾರಕ್ಕೆ ಹೆಸರು, ನಿಮಗೂ ಹೆಸರು, ಅದರಂತೆ ನಿರ್ಲಕ್ಷ್ಯ ಧೋರಣೆ ತಾಳದೆ ಜನಪರ ಕೆಲಸಗಳನ್ನು ಕಟಿಬದ್ಧರಾಗಿ ಮಾಡುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ನೀವೆಲ್ಲಾ ಸರ್ಕಾರದ ಭಾಗವಾಗಿದ್ದೀರಿ. ನಿಮ್ಮ ಆತ್ಮಸಾಕ್ಷಿ ಒಪ್ಪುವ ಹಾಗೆ ಕೆಲಸ ಮಾಡಿ. ಆಡಳಿತದ ಹಾದಿತಪ್ಪಲು ನಾನು ಅವಕಾಶ ಕೊಡುವುದಿಲ್ಲ. ಕೆಲಸ ಮಾಡದ ಅಧಿಕಾರಿಗಳನ್ನು ನಾನುಸಹಿಸಿಕೊಳ್ಳುವುದಿಲ್ಲ ಎಂದು ಡಿ.ಕೆ. ಶಿವಕುಮಾರ್ ಹೇಳಿದರು ಆಡಳಿತದಲ್ಲಿ ಭ್ರಷ್ಟಾಚಾರಕ್ಕೆ ಕಡಿವಾಣ ಹಾಕಿ. ಭ್ರಷ್ಟಾಚಾರ ಮುಕ್ತ ಆಡಳಿತ ನೀಡುವ ನನ್ನ ಸಂಕಲ್ಪಕ್ಕೆ ಕೈಜೋಡಿಸಿ ಕೆಲಸ ಮಾಡಿ ಎಂದು ಅವರು ಅಧಿಕಾರಿಗಳಿಗೆ ಹೇಳಿದರು.

ಸಿಎಸ್‌ಆರ್ ದುರ್ಬಳಕೆ ತಪ್ಪಿಸಿ: ರಾಜ್ಯದಲ್ಲಿ ಸಿಎಸ್‌ಆರ್ ನಿಧಿ ದುರ್ಬಳಕೆ ಆಗುತ್ತಿದೆ. ರಾಜ್ಯದಲ್ಲಿ ದುಡಿದ ಹಣವನ್ನು ಬೇರೆ ರಾಜ್ಯಗಳಿಗೆ ಕೊಡುತ್ತಿದ್ದಾರೆ. ಇದನ್ನು ಪತ್ತೆ ಮಾಡಿಸಿಎಸ್‌ಆರ್ ದುರ್ಬಳಕೆ ತಪ್ಪಿಸಿ. ಸಿಎಸ್‌ಆರ್ ನಿಧಿ ಬಳಸಿ ರಾಜ್ಯದ ಗ್ರಾಮೀಓ ಭಾಗದಲ್ಲಿ ಹೆಚ್ಚು ಶಾಲೆಗಳನ್ನು ಮಾಡೋಣ ಎಂದು ಅವರು ಹೇಳಿದರು.

ಚುನಾವಣಾ ಆಯೋಗ ರಾಜ್ಯದಲ್ಲಿ ಎಸ್‌ಐಆರ್ ಮಾಡುತ್ತಿದೆ. ಈ ಬಗ್ಗೆ ಎಚ್ಚರಿಕೆ ಇರಲಿ., ತಪ್ಪು ಆಗದಂತೆ ನೋಡಿಕೊಳ್ಳಿ, ವೋಟಿಂಗ್ ರೈಟ್ ಇಲ್ಲದಿದ್ದರೆ ಗ್ಯಾರಂಟಿ ಇರಲ್ಲ. ಎಲ್ಲರಿಗೂ ಮತದಾನ ಹಕ್ಕು ಕೊಡಿಸುವುದು ನಮ್ಮ ನಿಮ್ಮ ಜವಾಹ್ದಾರಿ ಆಗಿದೆ ಎಂದು ಹೇಳಿದರು.

ಯಾರು ಯಾರಿಗೆ ಮತ ಹಾಕುತ್ತಾರೋ ಬೇರೆ ವಿಚಾರ. ಆದರೆ ಎಲ್ಲರಿಗೂ ಮತದಾನದ ಹಕ್ಕು ಇರಬೇಕು ಎಂದು ಹೇಳಿದರು.

# ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್ ಪಾಸ್: ಅರ್ಜಿ ಆಹ್ವಾನ

**ರಾಯಚೂರು ಜೂನ್ 04 :** ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮಾಧ್ಯಮ ಪಟ್ಟಿಯಲ್ಲಿರುವ ದಿನಪತ್ರಿಕೆಗಳು ಅಥವಾ ಮಾಧ್ಯಮ ಸಂಸ್ಥೆಗಳಲ್ಲಿ ತಾಲ್ಲೂಕು ಮಟ್ಟದಲ್ಲಿ ಕಾರ್ಯನಿರ್ವಹಿಸುತ್ತಿರುವ ಪತ್ರಕರ್ತರಿಗೆ ತಿದ್ದುಪಡಿ ಮಾಡಲಾದ ಹೊಸ ಮಾರ್ಗಸೂಚಿಯನ್ವಯ ಉಚಿತ ಬಸ್ ಪಾಸ್ ನೀಡಲು ಅರ್ಜಿ ಆಹ್ವಾನಿಸಲಾಗಿದೆ.
ಪತ್ರಕರ್ತರು ಕಾರ್ಯನಿರ್ವಹಿಸುತ್ತಿರುವ ಸಂಸ್ಥೆಗಳಲ್ಲಿ ಪೂರ್ಣಾವಧಿ/ಅರೆಕಾಲಿಕ ವರದಿಗಾರರಾಗಿ ನೇಮಕವಾಗಿದ್ದಲ್ಲಿ ಆಯಾ ಮಾಧ್ಯಮ ಸಂಸ್ಥೆಯ ಸಂಪಾದಕರ/ ಸ್ಥಾನಿಕ ಸಂಪಾದಕರ/ ಮುಖ್ಯಸ್ಥರ ಶಿಫಾರಸ್ಸು ಪತ್ರ ಮತ್ತು ಸೇವಾ ಪ್ರಮಾಣ ಪತ್ರವನ್ನು ಲಗತ್ತಿಸಿ ಸೇವಾಸಿಂಧು ಪೋರ್ಟಲ್ https://sevasindhu.karnataka.gov.in ಮೂಲಕ ಆನ್ ಲೈನ್ ನಲ್ಲಿ ಅರ್ಜಿಗಳನ್ನು ಸಲ್ಲಿಸಬಹುದು.
2025ರ ಸೆಪ್ಟೆಂಬರ್ 12ರ ನಂತರ ಅರ್ಜಿಗಳನ್ನು ಸಲ್ಲಿಸಿದ್ದಲ್ಲಿ, ಮತ್ತೊಮ್ಮೆ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ.
ಈ ಹಿಂದೆ ಇದ್ದ ಮಾರ್ಗಸೂಚಿಯಲ್ಲಿ 11 ತಿಂಗಳ ವೇತನ ಪತ್ರ ಸಲ್ಲಿಸಬೇಕು ಎಂಬ ಷರತ್ತನ್ನು ಸಡಿಲಿಸಿ. ಆಯಾ ಮಾಧ್ಯಮ ಸಂಸ್ಥೆಯ ಸಂಪಾದಕರ, ಸ್ಥಾನಿಕ ಸಂಪಾದಕರ/ಮುಖ್ಯಸ್ಥರ ಶಿಫಾರಸ್ಸು ಪತ್ರವನ್ನು ಪರಿಗಣಿಸಲು ಅವಕಾಶ ಕಲ್ಪಿಸಲಾಗಿದೆ.
ಆನ್ ಲೈನ್ ನಲ್ಲಿ ಸಲ್ಲಿಸಲಾದ ಅರ್ಜಿ ಮತ್ತು ಲಗತ್ತಿಸಲಾಗಿರುವ ದಾಖಲೆಗಳ ಒಂದು ಪ್ರತಿಯನ್ನು ಆಯಾ ಜಿಲ್ಲೆಯ ವಾರ್ತಾಧಿಕಾರಿಗಳ ಕಚೇರಿಗೆ ಸಲ್ಲಿಸಬೇಕು. ಸ್ವೀಕೃತ ಅರ್ಜಿಗಳನ್ನು ಆಯ್ಕೆ ಸಮಿತಿಯ ಸಭೆಯಲ್ಲಿ ಪರಿಶೀಲಿಸಿ ಬಸ್ ಪಾಸ್ ಮಂಜೂರು ಮಾಡಲಾಗುತ್ತದೆ. ತಾಲ್ಲೂಕು ಮಟ್ಟದ ಪತ್ರಕರ್ತರಿಗೆ ಸುದ್ದಿ ಸಂಗ್ರಹಿಸಲು ಅನುಕೂಲ ಕಲ್ಪಿಸಲು ಸರ್ಕಾರವು ವಾರ್ತಾ ಇಲಾಖೆಯ ಮೂಲಕ ಉಚಿತ ಬಸ್ ಪಾಸ್ ಗಳನ್ನು ನೀಡುತ್ತಿದೆ.
ರಾಜ್ಯದ ಎಲ್ಲಾ ತಾಲ್ಲೂಕುಗಳ ಅರ್ಹ ಪತ್ರಕರ್ತರು ಕೂಡಲೇ ಸೇವಾಸಿಂಧು ಪೋರ್ಟಲ್ ಮೂಲಕ 2026ರ ಜೂನ್ 20ರೊಳಗೆ ಅರ್ಜಿಗಳನ್ನು ಸಲ್ಲಿಸಬೇಕು ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರಾದ ಹೇಮಂತ್ ನಿಂಬಾಳ್ಕರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನವಜಾತ ಶಿಶುವಿನಲ್ಲಿ ಚಯಾಪಚಯ ನ್ಯೂನ್ಯತೆಗಳನ್ನು ಆರಂಭಿಕ ಹಂತದಲ್ಲೇ ಪತ್ತೆ ಹಚ್ಚಲಾಗುವುದು: ಡಾ.ಸುರೇಂದ್ರ ಬಾಬು



ಧೈರ್ಯದ ದಾರಿ

**ರಾಯಚೂರು ಜೂನ್ 04:** ನವಜಾತ ಶಿಶುವಿನಲ್ಲಿ ಜನ್ಮಜಾತ ಚಯಾಪಚಯ ನ್ಯೂನ್ಯತೆಗಳನ್ನು ಆರಂಭಿಕ ಹಂತದಲ್ಲೇ ಪತ್ತೆ ಹಚ್ಚುವುದು ಶಿಶುವಿನ ದೈಹಿಕ ಮತ್ತು ಮಾನಸಿಕ ಬೆಳವಣಿಗೆಗೆ ಅತ್ಯಂತ ಅವಶ್ಯಕವಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರ ಬಾಬು ಅವರು ಹೇಳಿದರು.
ಜೂನ್ 02ರ ಮಂಗಳವಾರ ದಂದು ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕೃಷ್ಣ ಸಭಾಂಗಣದಲ್ಲಿ ಜನ್ಮಜಾತ ಚಯಾಪಚಯ ನ್ಯೂನ್ಯತೆಗಳನ್ನು ಪತ್ತೆ ಹಚ್ಚುವ ವಿಧಾನಗಳ ಕುರಿತು ತರಬೇತಿ ಕಾರ್ಯಾಗಾರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.
ನವಜಾತ ಶಿಶುಗಳಲ್ಲಿ ಆರೋಗ್ಯ ಸ್ಥಿತಿಯ ಜೈವಿಕ ಕ್ರಿಯೆಯಲ್ಲಿ (ಚಯಾಪಚಯ) ಕೆಲವು ಜನ್ಮಜಾತ ದೋಷಗಳನ್ನು ನಿರ್ಲಕ್ಷಿಸಿದರೆ ಮಗುವಿನ ಕುಂಠಿತ ಬೆಳವಣಿಗೆಗೆ ಕಾರಣವಾಗುತ್ತದೆ. ಹೆರಿಗೆ ಸಮಯದಲ್ಲಿ ಎಲ್ಲ ಸರಕಾರಿ ಆಸ್ಪತ್ರೆಗಳಲ್ಲಿ ಪ್ರಯೋಗಾಲಯ ಸೇವೆ ಮೂಲಕ ಪತ್ತೆ ಹಚ್ಚಿ ಚಿಕಿತ್ಸೆ ನೀಡುವ ಸೌಲಭ್ಯವನ್ನು ಕರ್ನಾಟಕ ಸರಕಾರವು ಕಲ್ಯಾಣ ಕರ್ನಾಟಕ ಹಾಗೂ ಗಣಿ ಭಾದಿತ ಜಿಲ್ಲೆಗಳಿಗೆ ಮೊದಲ ಆಧ್ಯತೆ ನೀಡಿ ಆರಂಭಿಸಿದ್ದು, ಮಗುವಿನ ಬೆಳವಣಿಗೆಗೆ ಪೂರಕವಾದ ಈ ಸೌಲಭ್ಯವನ್ನು ಪಡೆಯಲು ಹೆಚ್ಚು ಜಾಗೃತಿ ಮೂಡಿಸಬೇಕು. ಅಲ್ಲದೆ ಸರ್ಕಾರದ ಈ ಸೌಲಭ್ಯವನ್ನು ಸದುಪಯೋಗ ಪಡಿಸಿಕೊಳ್ಳಲು ಸಾರ್ವಜನಿಕರಿಗೆ ತಿಳುವಳಿಕೆ ಮೂಡಿಸಬೇಕೆಂದರು.
ಈ ವೇಳೆ ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ನಂದಿತಾ ಎಮ್.ಎನ್. ಅವರು ಮಾತನಾಡಿ, ಮಗು ಜನಿಸಿದ ತಕ್ಷಣವೇ ಕೈಗೊಳ್ಳುವ ನವಜಾತ ಶಿಶು ತಪಾಸಣೆ ಮೂಲಕ ಈ ದೋಷಗಳನ್ನು ಮೊದಲೇ ಪತ್ತೆ ಹಚ್ಚಬಹುದಾಗಿದೆ. ಥೈರಾಯಿಡ್ ಕಾಯಿಲೆಯನ್ನು ಆರಂಭಿಕ ಹಂತದಲ್ಲಿ ಪತ್ತೆ ಹಚ್ಚಿದರೆ ನಿರ್ದಿಷ್ಟ ಆಹಾರ ಪದ್ಧತಿ ಮತ್ತು ಔಷಧಿಗಳ ಮೂಲಕ ಮಗುವಿನ ಸಾಮಾನ್ಯ ಬೆಳವಣಿಗೆಯನ್ನು ಖಚಿತಪಡಿಸಿಕೊಳ್ಳಬಹುದಾಗಿದೆ. ಆಸ್ಪತ್ರೆಗೆ ಬರುವ ತಾಯಂದಿರು ಪಾಲಕರಿಗೆ ತಮ್ಮ ಮಗುವಿಗೆ ಇಂತಹ ಸಮಸ್ಯೆಗಳ ಬಗ್ಗೆ ಅನುಮಾನವಿದ್ದರೆ, ಕೂಡಲೇ ಸರ್ಕಾರಿ ಆಸ್ಪತ್ರೆಯ ಮಕ್ಕಳ ತಜ್ಞರ ಸಲಹೆಯನ್ನು ಪಡೆಬೇಕೆಂದರು.
ಇದೇ ಸಂದರ್ಭದಲ್ಲಿ ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ.ಮಹಮ್ಮದ್ ಶಾಕೀರ್, ಯುಎನ್‌ಡಿಪಿ ರಾಕೇಶ್, ಡಿಪಿಸಿ ಹಾಗೂ ಸಿಪಿಓ ಬಸವರಾಜಪ್ಪಗೌಡ, ಎಮ್‌ಎನ್‌ಡಿ ಜಿಲ್ಲಾ ವ್ಯವಸ್ಥಾಪಕ ಗುರುಗುಪ್ಪಾ ಸೇರಿದಂತೆ ಜಿಲ್ಲೆಯ ವಿವಿಧ ವೈದ್ಯಕೀಯ ಪ್ರಯೋಗ ಶಾಲಾ ತಂತ್ರಜ್ಞರು ತರಬೇತಿ ಕಾರ್ಯಾಗಾರದಲ್ಲಿ ಇದ್ದರು.

# ವಿದ್ಯುತ್ ಖಾಸಗೀಕರಣದಿಂದ ಗುತ್ತಿಗೆದಾರರ ಬದುಕಿಗೆ ಸಂಕಷ್ಟ: ರಾಜಕುಮಾರ ಸಂಗನಳ್ಳಿ

**ಬೀದರ್, ಜೂ 4:** ವಿದ್ಯುತ್ ವಿತರಣಾ ಕ್ಷೇತ್ರದಲ್ಲಿ ಖಾಸಗಿ ಕಂಪನಿಗಳಿಗೆ ಪರವಾನಗಿ ನೀಡುವ ಪ್ರಸ್ತಾವನೆಯನ್ನು ಕಲ್ಯಾಣ ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅನುಮತಿ ಪಡೆದ ವಿದ್ಯುತ್ ಗುತ್ತಿಗೆದಾರರ ಸಂಘ ತೀವ್ರವಾಗಿ ವಿರೋಧಿಸಿದೆ. ಖಾಸಗೀಕರಣದಿಂದ ಸಾವಿರಾರು ವಿದ್ಯುತ್ ಗುತ್ತಿಗೆದಾರರ ಉದ್ಯೋಗ ಭದ್ರತೆಗೆ ಧಕ್ಕೆಯಾಗುವ ಸಾಧ್ಯತೆ ಇದ್ದು, ಗ್ರಾಹಕರ ಮೇಲೂ ಹೆಚ್ಚುವರಿ ಹೊರೆ ಬೀಳಲಿದೆ ಎಂದು ಸಂಘದ ವಿಭಾಗೀಯ ಅಧ್ಯಕ್ಷ ರಾಜಕುಮಾರ ಸಂಗನಳ್ಳಿ ತಿಳಿಸಿದ್ದಾರೆ.


ಈ ಕುರಿತು ಪತ್ರಿಕಾ ಪ್ರಕಟಣೆ ಹೊರಡಿಸಿದ ಅವರು, ರಾಜ್ಯದಲ್ಲಿ ಹಲವು ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ವಿದ್ಯುತ್ ಗುತ್ತಿಗೆದಾರರ ಜೀವನೋಪಾಯಕ್ಕೆ ಖಾಸಗೀಕರಣದಿಂದ ಗಂಭೀರ ಪರಿಣಾಮ ಉಂಟಾಗಬಹುದು ಎಂದು ಆತಂಕ ವ್ಯಕ್ತಪಡಿಸಿದರು.

ಖಾಸಗಿ ಕಂಪನಿಗಳ ಪ್ರವೇಶದಿಂದ ವಿದ್ಯುತ್ ಸೇವೆಗಳ ವೆಚ್ಚ ಹೆಚ್ಚಾಗುವ ಸಾಧ್ಯತೆ ಇದೆ. ಇದರಿಂದ ಸಾರ್ವಜನಿಕರು ಹೆಚ್ಚುವರಿ ಶುಲ್ಕ ಪಾವತಿಸಬೇಕಾಗುವ ಜೊತೆಗೆ ವಿವಿಧ ಸೇವಾ ಸಮಸ್ಯೆಗಳನ್ನು ಎದುರಿಸಬೇಕಾಗಬಹುದು ಎಂದು ಅವರು ಹೇಳಿದರು.

ವಿದ್ಯುತ್ ವಿತರಣಾ ವ್ಯವಸ್ಥೆಯು ಸಾರ್ವಜನಿಕ ಹಿತಾಸಕ್ತಿಯನ್ನು ಗಮನದಲ್ಲಿಟ್ಟುಕೊಂಡು ಕಾರ್ಯನಿರ್ವಹಿಸಬೇಕಿದ್ದು, ಖಾಸಗೀಕರಣದಿಂದ ಉದ್ಯೋಗ ಭದ್ರತೆ ಮತ್ತು ಸೇವಾ ಗುಣಮಟ್ಟದ ಮೇಲೆ ಪ್ರತಿಕೂಲ ಪರಿಣಾಮ ಉಂಟಾಗುವ ಸಾಧ್ಯತೆ ಇದೆ. ಹೀಗಾಗಿ ಸರ್ಕಾರ ಈ ಪ್ರಸ್ತಾವನೆಯನ್ನು ತಕ್ಷಣವೇ ಹಿಂಪಡೆಯಬೇಕು ಎಂದು ರಾಜಕುಮಾರ ಸಂಗನಳ್ಳಿ ಒತ್ತಾಯಿಸಿದರು.

ವಿದ್ಯುತ್ ಗುತ್ತಿಗೆದಾರರ ಹಿತಾಸಕ್ತಿ ಹಾಗೂ ಗ್ರಾಹಕರ ಕಲ್ಯಾಣವನ್ನು ಕಾಪಾಡುವ ನಿಟ್ಟಿನಲ್ಲಿ ಸರ್ಕಾರ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಅವರು ಆಗ್ರಹಿಸಿದರು.

# ಕರಾವಳಿಯಲ್ಲಿ ಭಾರೀ ಮಳೆ: ಹವಾಮಾನ ಇಲಾಖೆ ಸೂಚನೆ



ಕರಾವಳಿ ಕರ್ನಾಟಕಕ್ಕೆ ಭಾರೀ ಮಳೆ ಹಾಗೂ ಗುಡುಗು ಸಹಿತ ಗಾಳಿಯ ಮುನ್ನೆಚ್ಚರಿಕೆ (ಜೂನ್ 3 ರಿಂದ ಜೂನ್ 6) ನೀಡಲಾಗಿದೆ. ಕರಾವಳಿ ಕರ್ನಾಟಕದ ಜಿಲ್ಲೆಗಳಲ್ಲಿ ಮುಂಗಾರು/ ಮುಂಗಾರು ಪೂರ್ವ ಚಟುವಟಿಕೆಗಳು ಚುರುಕುಗೊಂಡಿರುವುದನ್ನು ಗಮನಿಸಿ, ಭಾರತೀಯ ಹವಾಮಾನ ಇಲಾಖೆಯು (IMD) ಮುಂದಿನ ನಾಲ್ಕು ದಿನಗಳ ಸಮಗ್ರ ಹವಾಮಾನ ಮುನ್ನೆಚ್ಚರಿಕಾ ಪ್ರಕಟಣೆಯನ್ನು ಬಿಡುಗಡೆ ಮಾಡಿದೆ. ಸಾರ್ವಜನಿಕರು, ಮೀನುಗಾರರು ಮತ್ತು ಸ್ಥಳೀಯ ಆಡಳಿತ ಸಂಸ್ಥೆಗಳು ಮುನ್ನೆಚ್ಚರಿಕೆ ವಹಿಸಲು ಕೋರಲಾಗಿದೆ.ನಾಲ್ಕು ದಿನಗಳ ಜಿಲ್ಲಾವಾರು ಹವಾಮಾನ ಮುನ್ಸೂಚನೆ ಮತ್ತು ಮುನ್ನೆಚ್ಚರಿಕೆ ಪಟ್ಟಿ

ಒಂದೆರಡು ಕಡೆಗಳಲ್ಲಿ ಗುಡುಗು ಸಹಿತ ಭಾರಿ ಮಳೆಯಾಗುವ ಸಾಧ್ಯತೆ ಇದೆ. । ಹಗುರದಿಂದ ಸಾಧಾರಣ ಮಳೆ ಜಿಲ್ಲೆಯ ಬಹುತೇಕ ಸ್ಥಳಗಳಲ್ಲಿ ಗುಡುಗು ಸಹಿತ ಮಳೆಯಾಗುವ ಸಾಧ್ಯತೆ ಇದೆ. ಒಂದೆರಡು ಕಡೆಗಳಲ್ಲಿ ಭಾರಿ ಮಳೆಯಾಗುವ ಸಾಧ್ಯತೆ ಇದೆ. । *ಹಗುರದಿಂದ ಸಾಧಾರಣ ಮಳೆ ಜಿಲ್ಲೆಯ ಬಹುತೇಕ ಸ್ಥಳಗಳಲ್ಲಿ ಮಳೆಯಾಗುವ ಸಾಧ್ಯತೆ ಇದೆ. ಸಾರ್ವಜನಿಕರು ಗುಡುಗು–ಮಿಂಚಿನ ಸಮಯದಲ್ಲಿ ಮರಗಳ ಕೆಳಗೆ ಅಥವಾ ದುರ್ಬಲ ಕಟ್ಟಡಗಳ ಬಳಿ ಆಶ್ರಯ ಪಡೆಯಬಾರದು ಎಂದು ವಿನಂತಿಸಲಾಗಿದೆ.

# ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದಿಂದ ಜೂನ್ 05ರಂದು ವಿಶ್ವ ಪರಿಸರ ದಿನಾಚರಣೆ ಕಾರ್ಯಕ್ರಮ

**ರಾಯಚೂರು ಜೂನ್ 04:** ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ನ್ಯಾಯಾಂಗ ಇಲಾಖೆ, ಜಿಲ್ಲಾಡಳಿತ, ಅರಣ್ಯ ಇಲಾಖೆ ಹಾಗೂ ಜಿಲ್ಲಾ ವಕೀಲರ ಸಂಘ ರಾಯಚೂರು ಇವರುಗಳ ಸಂಯುಕ್ತಾಶ್ರಯದಲ್ಲಿ ವಿಶ್ವ ಪರಿಸರ ದಿನಾಚರಣೆಯ ಅಂಗವಾಗಿ ಸಸಿಗಳನ್ನು ನೆಡುವ ಕಾರ್ಯಕ್ರಮವನ್ನು ನಗರದ ನೂತನ ನ್ಯಾಯಾಲಯಗಳ ಕಟ್ಟಡದ ಆವರಣದಲ್ಲಿ ಮೇ.05ರ ಬೆಳಿಗ್ಗೆ 9.30ಗಂಟೆಗೆ ಹಮ್ಮಿಕೊಳ್ಳಲಾಗಿದೆ.
ರಾಯಚೂರಿನ 1ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಗೌರವಾನ್ವಿತ ಶ್ರೀಮತಿ ಮಾಲಾ ಎನ್.ಡಿ. ಅವರು ಉದ್ಘಾಟನೆ ನೆರವೇರಿಸುವರು.
ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಮಲ್ಲಿಕಾರ್ಜುನ್ ಅವರು ಅಧ್ಯಕ್ಷತೆ ವಹಿಸುವರು.
ಮುಖ್ಯ ಅತಿಥಿಗಳಾಗಿ ರಾಯಚೂರಿನ ಪ್ರಾದೇಶಿಕ ಅರಣ್ಯ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ಸುರೇಶ ಬಾಬು, ಕುಟುಂಬ ನ್ಯಾಯಾಲಯದ ಪ್ರಧಾನ ನ್ಯಾಯಾಧೀಶರಾದ ಗೌರವಾನ್ವಿತ ಶ್ರೀಕಾಂತ್.ಎಸ್.ವಿ, ಹಿರಿಯ ಶ್ರೇಣಿ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಗೌರವಾನ್ವಿತ ಸಿದ್ದರಾಮಪ್ಪ ಕಲ್ಯಾಣರಾವ್, ಸಿ.ಜೆ.ಎಂ. ನ್ಯಾಯಾಲಯದ ಪ್ರಧಾನ ಹಿರಿಯ ಶ್ರೇಣಿ ದಿವಾಣಿ ನ್ಯಾಯಾಧೀಶರಾದ ಗೌರವಾನ್ವಿತ ಶ್ರೀಮತಿ ಬಿ.ಟಿ. ಅನ್ನಪೂರ್ಣೇಶ್ವರಿ, ಜೆ.ಎಂ.ಎಫ್.ಸಿ ನ್ಯಾಯಾಲಯದ 1ನೇ ಹೆಚ್ಚುವರಿ ಹಿರಿಯ ಶ್ರೇಣಿ ದಿವಾಣಿ ನ್ಯಾಯಾಧೀಶರಾದ ಗೌರವಾನ್ವಿತ ಶ್ರೀ.ಶಂಕರಪ್ಪ ಮಾಲಶೆಟ್ಟಿ, ಜೆ.ಎಂ.ಎಫ್.ಸಿ ನ್ಯಾಯಾಲಯದ 2ನೇ ಹೆಚ್ಚುವರಿ ಹಿರಿಯ ಶ್ರೇಣಿ ದಿವಾಣಿ ನ್ಯಾಯಾಧೀಶರಾದ ಗೌರವಾನ್ವಿತ ಸಾಗರ್ ಗುರುಗೌಡ ಪಾಟೀಲ್, ಜೆ.ಎಂ.ಎಫ್.ಸಿ. 3ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರಾದ ಗೌರವಾನ್ವಿತ ಶ್ರೀ.ಚನ್ನಬಸಪ್ಪ ಆರ್. ಕೂಡಿ, ವಲಯ ಅರಣ್ಯ ಅಧಿಕಾರಿ ರಾಜೇಶ ನಾಯಕ ಅವರು ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಬಾಗಿಯಾಗಲಿದ್ದಾರೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಕಚೇರಿಯು ಪ್ರಕಟಣೆಯಲ್ಲಿ ತಿಳಿಸಿದೆ.

# ಜನರ ಪ್ರೀತಿ ವಿಶ್ವಾಸವೇ ಶ್ರೀ ರಕ್ಷೆ : ಕುಶರಾಜ್ ಪರಣ್ಣವರ



**ವಿಜಯಪುರ, ಜೂ. 4:** ದೇವರ ಮೇಲಿನ ನಂಬಿಕೆ, ನಿಸ್ವಾರ್ಥ ಸಮಾಜ ಸೇವೆ, ಜನರ ಪ್ರೀತಿ ವಿಶ್ವಾಸವೇ ಶ್ರೀ ರಕ್ಷೆ ಎಂದು ಹಿರಿಯ ನಾಯಕ, ಗಣ್ಯ ಉದ್ದಿಮೆದಾರ ಕುಶರಾಜ್ ಪರಣ್ಣವರ ಹೇಳಿದರು.

ನಗರದ ಶ್ರೀ ಸುಂದರೇಶ್ವರ ದೇವಸ್ಥಾನದಲ್ಲಿ ಸೋಮವಾರ ಸದ್ಭಕ್ತರ ಭಜನಾ ಮಂಡಳಿಯವರು ಏರ್ಪಡಿಸಿದ್ದ ಅವರ 58 ನೇ ಜನ್ಮ ದಿನಾಚರಣೆ ಸಮಾರಂಭದಲ್ಲಿ ಪಾಲ್ಗೊಂಡು ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು,ಮಾನವನ ಜೀವನದಲ್ಲಿ ಕಷ್ಟ ಕಾರ್ಪಣ್ಯಗಳು ಹಲವಾರು ಬಂದರೂ. ಅವುಗಳ ನಿವಾರಣೆಗೆ ಗುರುಗಳ ಮಾರ್ಗದರ್ಶನ, ದೇವರ ಆಶೀರ್ವಾದ ಅತ್ಯವಶ್ಯಕ, ಭಕ್ತಿ, ಜ್ಞಾನ, ಭಜನೆ, ಸಂಕೀರ್ತನೆಯಿಂದ, ಮನಸ್ಸು ಶಾಂತವಾಗಿ ಸಾಧನೆಗೆ ದಾರಿಯಾಗುತ್ತದೆ. ಕಾರಣ ಪ್ರತಿಯೊಬ್ಬರು, ಭಗವಂತನ ಚಿಂತನ, ಸ್ಮರಣ, ಸತ್ಸಂಗದಲ್ಲಿರಬೇಕು ಎಂದರು. ಹಾಗೂ ದಕ್ಷಿಣ ಕಾಶಿ ಪವಿತ್ರ ಸುಂದರೇಶ್ವರರ ಸನ್ನಿಧಿಯಲ್ಲಿ ಆತ್ಮೀಯರು ತಮ್ಮ ಹುಟ್ಟು ಹಬ್ಬ ಆಚರಿಸಿ ಹಾರೈಸಿದ್ದು ಹೆಚ್ಚು ಸಂತಸ ತಂದಿದ್ದು, ಜವಾಬ್ದಾರಿಯನ್ನು ಹೆಚ್ಚಿಸಿದೆ, ಹೆಚ್ಚಿನ ಸಮಾಜ ಸೇವೆಗೆ ಪ್ರೇರಣೆ ನೀಡಿದೆ ಎಂದು ಎಲ್ಲರಿಗೂ

ಕೃತಜ್ಞತೆ ಸಲ್ಲಿಸಿದರು,ನ್ಯಾಯವಾದಿ ದಾನೇಶ ಅವಟಿ ಅವರು ಮಾತನಾಡಿ, ಹಿರಿಯರು, ಕಿರಿಯರು ಎಂದು ಬೇದಭಾವ ಮಾಡದೇ ಎಲ್ಲರೊಂದಿಗೆ ಬೆರೆತು, ಜನರ ನೋವು–ನಲಿವಿಗೆ ಸ್ಪಂದಿಸುತ್ತಾ ಕುಶಿರಾಜ್ ಅವರು ಇದ್ದಲ್ಲೇಲ್ಲಾ ಖುಷಿ, ಸಂತಸದ ವಾತಾವರಣ ತುಂಬುವುದರಲ್ಲಿ ನಿರತರಾಗಿದ್ದಾರೆ. ಜನರ ನಾಡಿ ಮಿಡಿತವನ್ನು ಅರಿತು ಅವರು ಬಡವರು, ನೊಂದವರು, ದುಃಖಿತರಿಗೆ ತುಂಬುವ ಮಾನಸಿಕ ಧೈರ್ಯ, ಸಹಾಯ ಸಾಂತ್ವನಅನನ್ಯವಾದುದು. ಅವರ ಭಾವಿ ಜೀವನ ಉಜ್ವಲವಾಗಿ ದೇವರು ಅವರ ಕುಟುಂಬ ವರ್ಗದವರನ್ನು ಚೆನ್ನಾಗಿ ಇಟ್ಟಿರಲಿ. ಅವರಿಂದ ಇನ್ನೂ ಹೆಚ್ಚು ಉತ್ತಮ ಕಾರ್ಯಗಳು ಆಗಲಿ ಎಂದು ಹಾರೈಸಿದರು. ಸನಾತನ ಹಿಂದೂ ಸಂರಕ್ಷಣಾ ಸಮಿತಿ ಅಧ್ಯಕ್ಷ ಸುರೇಶಗೌಡಪಾಟೀಲ ಅವರು ಮಾತನಾಡಿ, ಕುಶರಾಜ್ ಗೌಡರ ಅಂಥ ವ್ಯಕ್ತಿಗಳು ಸಮಾಜದಲ್ಲಿ ಸಿಗುವುದು ಅಪರೂಪ. ಅವರ ಕೊಡುಗೆ ಅಪಾರ.ಅಂಥವರು ಬಾಳಿದ ಬದುಕೇ ಇತರರಿಗೆ ಮಾದರಿ. ಅವರಿಗೆ ದೇವರು ಆಯುರಾರೋಗ್ಯ ಭಾಗ್ಯವನ್ನು ಕರುಣಿಸಲಿ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಪಾರಿಸ್ ಶಿರಹಟ್ಟಿ, ಹನಮಂತ ಕಲಾದಗಿ,

ಶ್ರೀಮಂತ ಆಣೆಪ್ಪನವರ, ಈರಣ್ಣ ಪಾಟೀಲ, ಈಶ್ವರ ಸಾಲಿ, ರಾಘವೇಂದ್ರ ತೂನಸ್ಯಾಳ, ವೀರೇಂದ್ರ ಪಾಟೀಲ, ಶಿವಶಂಕರ ಮಠ, ರಾಕೇಶ್ ಮತ್ತಿತರರು ಇದ್ದರು.

# ಕೆಪಿ ವಿದ್ಯಾ ಸಂಸ್ಥೆಯಲ್ಲಿ ವಿದ್ಯಾರ್ಥಿಗಳಿಗೆ ಆತ್ಮೀಯ ಸ್ವಾಗತ

**ಬೀದರ:ಜೂ.4:** ಕೆಪಿ ವಿದ್ಯಾ ಸಂಸ್ಥೆಯ ಅಡಿಯಲ್ಲಿ ನಡೆಯುತ್ತಿರುವ ಕನ್ಯಕಾ ಪರಮೇಶ್ವರಿ ಪ್ರಾಥಮಿಕ ಪ್ರೌಢ ಹಾಗೂ ಆಂಗ್ಲ ಮಾಧ್ಯಮ 2026–27ನೇ ಸಾಲಿನ ಶಾಲಾ ಪ್ರಾರಂಭೋತ್ಸವದ ಮೊದಲ ದಿನವಾದ ಇಂದು ಸಂಸ್ಥೆಯ ಅಧ್ಯಕ್ಷರಾದ ಬಾಬು ವಾಲಿ ಮಕ್ಕಳಿಗೆ ಹೂ ಚೆಲ್ಲುವ ಮೂಲಕ ಆತ್ಮೀಯವಾಗಿ ಬರಮಾಡಿಕೊಂಡರು.

ಈ ಸಂಧರ್ಭದಲ್ಲಿ ಶಾಲಾ ವಿದ್ಯಾರ್ಥಿಗಳು ಓಣಿಯ ಸುತ್ತ ಪರೇಡ್ ನಡೆಸಿ ಮಕ್ಕಳು ಶಾಲೆಗೆ ಹೋಗುವಂತೆ ವಿಶೇಷ ಸಂದೇಶ ಸಾರಿದರು.

2026–27ನೇ ಶೈಕ್ಷಣಿಕ ವರ್ಷದ ಮೊದಲನೇ ದಿನದಿಂದ ಹಿಡಿದು ಒಂದೂ ದಿನವೂ ತಪ್ಪದೇ ಶಾಲೆಗೆ ಶ್ರದ್ಧೆ ಭಕ್ತಿಯಿಂದ ಹಾಜರಾಗಿ ಆಟ ಪಾಠ ಸೇರಿದಂತೆ ಎಲ್ಲಾ ವಿಷಯಗಳಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡು ಉತ್ತಮ ಫಲಿತಾಂಶ ತೆಗೆದು ಶಾಲೆಗೆ ಶಿಕ್ಷಕರಿಗೆ ಪೋಷಕರಿಗೆ ಉತ್ತಮ ಹೆಸರು ತರಬೇಕು ಎಂದು ಸಂಸ್ಥೆಯ ಅಧ್ಯಕ್ಷರಾದ ಬಾಬು ವಾಲಿ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಸಲಹೆ ನೀಡಿದರು.




ಈ ಶುಭ ಸಂಧರ್ಭದಂದು ಪ್ರಾಥಮಿಕ ಹಾಗೂ ಪ್ರೌಢ ಶಾಲೆಯ ವಿದ್ಯಾರ್ಥಿಗಳಿಗೆ ಪಠ್ಯಪುಸ್ತಕ ವಿತರಿಸಲಾಯಿತು.

ಈ ಸಂಧರ್ಭದಲ್ಲಿ ಸಂಸ್ಥೆಯ ಆಡಳಿತ ಮಂಡಳಿ ಸದಸ್ಯರಾದ ಮಲ್ಲಪ್ಪ ಬೊತಗಿ, ಮುಖ್ಯಗುರುಗಳಾದ ವಿಜಯಕುಮಾರ ಪಾಟೀಲ ಯರನಳ್ಳಿ, ಸೇರಿದಂತೆ ಶಿಕ್ಷಕ ವೃಂದದವರು, ಪೋಷಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಪಿಯು ಉಪನ್ಯಾಸಕರ ಸಂಘಕ್ಕೆ ನೂತನ ಪದಾಧಿಕಾರಿಗಳ ಅವಿರೋಧ ಆಯ್ಕೆ

**ಯಾದಗಿರಿ:ಜೂ.4:** ಕರ್ನಾಟಕ ರಾಜ್ಯ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಸಂಘದ ಯಾದಗಿರಿ ಜಿಲ್ಲಾ ಘಟಕದ 2026–31ನೇ ಸಾಲಿನ ಅವಧಿಗೆ ನಡೆದ ಚುನಾವಣೆಯಲ್ಲಿ ಎಲ್ಲಾ ಹುದ್ದೆಗಳಿಗೆ ಅಭ್ಯರ್ಥಿಗಳು ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಜಿಲ್ಲಾ ಚುನಾವಣಾಧಿಕಾರಿ ಮಲ್ಲಯ್ಯಸ್ವಾಮಿ ಮಠಪತಿ ತಿಳಿಸಿದ್ದಾರೆ.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಬುಧವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಂಘದ ಒಂಬತ್ತು ಪ್ರಮುಖ ಹುದ್ದೆಗಳಿಗೆ ನಡೆದ ಚುನಾವಣಾ ಪ್ರಕ್ರಿಯೆಯಲ್ಲಿ ಯಾವುದೇ ಸ್ಪರ್ಧೆ ಎದುರಾಗದೆ ಎಲ್ಲ ಅಭ್ಯರ್ಥಿಗಳು ಅವಿರೋಧವಾಗಿ ಆಯ್ಕೆಯಾಗಿರುವುದು ಸಂಘದ ಏಕತೆ ಹಾಗೂ ಬಾಂಧವ್ಯಕ್ಕೆ ಸಾಕ್ಷಿಯಾಗಿದೆ ಎಂದು ಹೇಳಿದರು.

ಅವಿರೋಧವಾಗಿ ಆಯ್ಕೆಯಾದ ಪದಾಧಿಕಾರಿಗಳಲ್ಲಿ ಜಿಲ್ಲಾಧ್ಯಕ್ಷರಾಗಿ ಡಾ. ರವೀಂದ್ರನಾಥ ಹೊಸಮನಿ, ಕಾರ್ಯಾಧ್ಯಕ್ಷರಾಗಿ ಸುದರ್ಶನ್ ರೆಡ್ಡಿ, ಉಪಾಧ್ಯಕ್ಷರಾಗಿ ನಿರ್ಮಲಾ ಸಿನ್ನೂರು, ಖಜಾಂಚಿಯಾಗಿ ರವೀಂದ್ರ ಗುತ್ತೇದಾರ್, ಪ್ರಧಾನ ಕಾರ್ಯದರ್ಶಿಯಾಗಿ ಅಮರೇಶ ಭಂಗೂರ್, ಪ್ರಧಾನ ಸಂಘಟನಾ ಕಾರ್ಯದರ್ಶಿಯಾಗಿ ರುದ್ರೆಗೌಡ ಬಿರಾದರ್, ಕಾರ್ಯದರ್ಶಿಯಾಗಿ ಚಂದ್ರಶೇಖರ್ ಡೊಣ್ಣೆಗೌಡ, ಜಂಟಿ ಕಾರ್ಯದರ್ಶಿಯಾಗಿ ಮರೆಪ್ಪ ನಾಯ್ಕೋಡಿ ಹಾಗೂ ಸಂಚಾಲಕರಾಗಿ ಸೋಫಿಸಾಬ್ ಗುತ್ತೇದಾರ್ ಆಯ್ಕೆಯಾಗಿದ್ದಾರೆ ಎಂದು ತಿಳಿಸಿದರು.




ಈ ಸಂದರ್ಭದಲ್ಲಿ ನೂತನ ಜಿಲ್ಲಾಧ್ಯಕ್ಷ ಡಾ. ರವೀಂದ್ರನಾಥ ಹೊಸಮನಿ ಮಾತನಾಡಿ, ಜಿಲ್ಲೆಯ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಹಿತಾಸಕ್ತಿ ರಕ್ಷಣೆ, ಶೈಕ್ಷಣಿಕ ಗುಣಮಟ್ಟ ವೃದ್ಧಿ ಹಾಗೂ ಸಂಘದ ಬಲವರ್ಧನೆಗೆ ಎಲ್ಲರ ಸಹಕಾರದೊಂದಿಗೆ ಕಾರ್ಯನಿರ್ವಹಿಸುವುದಾಗಿ ಭರವಸೆ ನೀಡಿದರು.

ಸುದ್ದಿಗೋಷ್ಠಿಯಲ್ಲಿ ನಿಕಟ ಪೂರ್ವ ಜಿಲ್ಲಾಧ್ಯಕ್ಷ ಮಹಾಂತೇಶ್ ಕಲಾಲ್, ಸಿದ್ರಾಮಪ್ಪ ಅನವಾರ ಸೇರಿದಂತೆ ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ನಾಲ್ವಡಿಯನ್ನು ಯುವ ಪೀಳಿಗೆಗೆ ಪರಿಚಯಿಸೋಣ: ಸಿ.ಎನ್.ಮಂಜೇಗೌಡ



**ಮೈಸೂರು.ಜೂ.4:–** ರಾಜ್ಯ ಸರ್ಕಾರ ನಾಲ್ವಡಿ ಕೃಷ್ಣರಾಜ ಒಡೆಯರಂತಹ ಮಹನೀಯರ ಜಯಂತಿ ಕಾರ್ಯಕ್ರಮವನ್ನು ಈಗಿನ ಯುವ ಪೀಳಿಗೆಗೆ ಪರಿಚಯಿಸುವ ಕೆಲಸ ಮಾಡಬೇಕು ಎಂದು ವಿಧಾನ ಪರಿಷತ್ ಸದಸ್ಯ ಸಿ.ಎನ್.ಮಂಜೇಗೌಡ ತಿಳಿಸಿದರು.ಮೈಸೂರಿನ ಕೋಟೆ ಆಂಜನೇಯ ಸ್ವಾಮಿ ದೇವಾಲಯದ ಎದುರು ಆಯೋಜಿಸಿದ್ದ ನಾಲ್ವಡಿಯವರ ಜಯಂತಿ ಕಾರ್ಯಕ್ರಮದಲ್ಲಿ ನಾಲ್ವಡಿಯವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಅವರು ಮಾತನಾಡಿದರು. ಈ ದೇಶ ಕಂಡ ಮಹಾನ್ ಮಹಾರಾಜ.

ಪ್ರಾತಃ ಸ್ಮರಣೀಯರು. ಅಭಿವೃದ್ಧಿಯ ಹರಿಕಾರ. ಕನ್ನಂಬಾಡಿ ಕಟ್ಟೆ, ಮೈಸೂರು ವಿಶ್ವವಿದ್ಯಾಲಯ ಹಾಗೂ ಶಿವನ ಸಮುದ್ರ ಜುಲೈ ವಿದ್ಯುತ್ ಗಾರ ಸೇರಿದಂತೆ ಹಲವಾರು ಹೊಸ ನೂತನ ಯೋಜನೆಗಳನ್ನು ಜಾರಿಗೆ ತಂದರು. ಜತೆಗೆ ಪ್ರಜೆಗಳ ಹಿತರಕ್ಷಣೆಗೆಗಾಗಿ ತಮ್ಮ ಜೀವನವನ್ನೇ ಮುಡಿಪಾಗಿಟ್ಟವರು. ಇವರು ರಾಜ್ಯವನ್ನು ವಿಸ್ತರಿಸದೆ, ಅಭಿವೃದ್ಧಿ ಕೆಲಸಗಳನ್ನು ಮಾಡಿ ಶಾಶ್ವತವಾಗಿ ಪ್ರಜೆಗಳ ಮನದಲಿ ಉಳಿದವರು ಎಂದು ಸ್ಮರಿಸಿದರು.

ಕರ್ನಾಟಕ ಸೇನಾ ಪಡೆಯ ಅಧ್ಯಕ್ಷ ತೇಜೇಶ್ ಲೋಕೇಶ್ ಗೌಡ ಮಾತನಾಡಿ ರಾಜ್ಯ ಸರ್ಕಾರ ನಾಲ್ವಡಿ ಕೃಷ್ಣರಾಜ ಒಡೆಯರ್ ಜೀವನ ಚರಿತ್ರೆಯನ್ನು ಪಠ್ಯಪುಸ್ತಕಗಳಲ್ಲಿ ಅಳವಡಿಸಬೇಕು ಹಾಗೂ ಕೇಂದ್ರ ಸರ್ಕಾರ ನಾಲ್ವಡಿರವರಿಗೆ ಮರಣೋತ್ತರ ಭಾರತ ರತ್ನ ಪ್ರಶಸ್ತಿಯನ್ನು ನೀಡಬೇಕೆಂದು ಒತ್ತಾಯಿಸಿದರು. ಪ್ರವಾಸಿಗರಿಗೆ ಎಪಿಎನ್ ಪ್ರಾಪರ್ಟೀಸ್ ನ ಅಧ್ಯಕ್ಷ ಎ.ಪಿ.ನಾಗೇಶ್ ಮೈಸೂರು ಪಾಕ್ ಅನ್ನು ವಿತರಿಸಿದರು. ಹಿರಿಯ ಸಮಾಜ ಸೇವಕ ಡಾ.ರಘುರಾಂ.ಕೆ.ವಾಜಪೇಯಿ ಮಾತನಾಡಿದರು.

ಮುಖ್ಯ ಅತಿಥಿಗಳಾಗಿ ಅರಮನೆ ಮಂಡಳಿ ಉಪ ನಿರ್ದೇಶಕ ಟಿ.ಎಸ್.ಸುಬ್ರಹ್ಮಣ್ಯ, ಕಾವೇರಿ ಕ್ರಿಯಾ ಸಮಿತಿ ಅಧ್ಯಕ್ಷ ಎಸ್.ಜಯಪ್ರಕಾಶ್, ಜೆಡಿಎಸ್ ನಗರಾಧ್ಯಕ್ಷ ಎಸ್ ಬಿಎಂ ಮಂಜು, ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ಅಧ್ಯಕ್ಷ ಕೆ.ಬಿ.ಲಿಂಗರಾಜು, ಸಮಾಜ ಸೇವಕ ಎಂ.ಎನ್.ದೊರೆಸ್ವಾಮಿ, ಮಹಾತ್ಮ ಗಾಂಧಿ ಶಿಕ್ಷಣ ಸಂಸ್ಥೆಗಳ ಅಧ್ಯಕ್ಷ ಟಿ.ಜಿ.ಆದಿಶೇಷಗೌಡ, ಗೋಲ್ಡನ್ ಸುರೇಶ್, ನಾಗೇಗೌಡ, ಕುಮಾರ್ ಗೌಡ, ಕೃಷ್ಣಪ್ಪ, ಪ್ರಭುಶಂಕರ, ಎಳನೀರು ರಾಮಣ್ಣ, ಸಿಂದುವಳ್ಳಿ ಶಿವಕುಮಾರ್, ನೇಹಾ, ಶೋಭಾರಾಣಿ ಗೌಡ, ಸುಜಾತಾ, ಸೌಮ್ಯ, ಇಂದಿರಾ, ಪದ್ಮಾ, ಪ್ರಭಾಕರ್, ಶಿವರಾಂ, ವಿಜಯೇಂದ್ರ, ರಾಧಾಕೃಷ್ಣ, ದರ್ಶನ್ ಗೌಡ, ಪ್ರದೀಪ್, ಗಣೇಶ್ ಪ್ರಸಾದ್, ವಿಷ್ಣು, ರವೀಶ್, ರವಿನಾಯಕ್ ಸೇರಿ ಇನ್ನಿತರರು ಉಪಸ್ಥಿತರಿದ್ದರು.

# ಸೇವಾ ಮನೋಭಾವನೆಯೊಂದಿಗೆ ಕಾರ್ಯ ನಿರ್ವಹಿಸಿ:ನಾಯಕ



**ಸೈದಾಪುರ:ಜೂ.4:**ತಮಗೆ ಕೊಟ್ಟಿರುವ ಜವಬ್ದಾರಿಯನ್ನು ಸೇವಾ ಮನೋಭಾನವ 'ಯೊಂದಿಗೆ ಕಾರ್ಯ ನಿರ್ವಹಿಸುವುದುರ ಮೂಲಕ ಉಪನ್ಯಾಸಕರ ಸಂಘದ ಅಭಿವೃದ್ದಿಗೆ ಪ್ರಯತ್ನ ಮಾಡಿ ಎಂದು ಮುಖ್ಯಗುರು ಲಿಂಗಾರೆಡ್ಡಿ ನಾಯಕ ಅಭಿಪ್ರಾಯಪಟ್ಟರು. ಪಟ್ಟಣದ ವಿದ್ಯಾ ವರ್ಧಕ ಸಂಸ್ಥೆಯ ವಿವಿಧ ವಿಭಾಗಗಳಿಂದ ಇತ್ತಿಚಿಗೆ ನಡೆದ ಕರ್ನಾಟಕ ರಾಜ್ಯ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಸಂಘದ ಜಿಲ್ಲಾ ಘಟಕದ ಚುನಾವಣೆಯಲ್ಲಿ ಕಾರ್ಯದರ್ಶಿಗಳಾಗಿ ಅವಿರೋಧ ಆಯ್ಕೆಯಾದ ಸಂಸ್ಥೆಯ ಮಲ್ಹಾರ ಕಾರಡ್ಡಿ ಬಸವಂತರಾಯ ಮತ್ತು ಸಿದ್ದಪ್ಪ ಸ್ಮಾರಕ ವಿದ್ಯಾ ವರ್ಧಕ ಪದವಿ ಪೂರ್ವ ಕಾಲೇಜಿನ ಕನ್ನಡ ಉಪನ್ಯಾಸಕ ಚಂದ್ರಶೇಖರ ಡೊಣ್ಣೆಗೌಡ ಅವರನ್ನು ಸನ್ಮಾನಿಸಿ ಮಾತನಾಡಿದರು. ಕೊಟ್ಟ ಅವಕಾಶವನ್ನು ಸರಿಯಾದ ರೀತಿಯಲ್ಲಿ ಸದುಪಯೋಗ ಪಡೆಸಿಕೊಂಡು ಪ್ರಯತ್ನ ಮಾಡಿದರೆ ಮುಂದಿನ ದಿನಗಳಲ್ಲಿ ಹೆಚ್ಚಿನ ಮಹತ್ವ ದೊರೆಯುತ್ತದೆ. ಸಂಘದ ಅಭಿವೃದ್ಧಿಯಲ್ಲಿ ನಿಮ್ಮದೆಯಾದ ಪ್ರಮುಖ ಪಾತ್ರ ನಿರ್ವಹಣೆ ಮಾಡುವಂತಾಗಲಿ ಎಂದು ಹಾರೈಸಿದರು.

ಸನ್ಮಾನ ಸ್ವೀಕರಿಸಿ ಉಪನ್ಯಾಸಕ ಚಂದ್ರಶೇಖರ ಡೊಣ್ಣೆಗೌಡ ಮಾತನಾಡಿ, ಇದರಿಂದ ನನ್ನ ಜವಬ್ದಾರಿ ಹೆಚ್ಚಾಗುವಂತೆ ಮಾಡಿದೆ. ಕಾರ್ಯದರ್ಶಿ ಸ್ಥಾನಕ್ಕೆ ನನ್ನನ್ನು ಅವಿರೋಧ ಆಯ್ಕೆಯಾಗಿರುವುದಕ್ಕೆ ಕಾರಣರಾದ ಎಲ್ಲರ ಭರವಸೆಯಂತೆ ಹಿರಿಯ ಮಾರ್ಗದರ್ಶನದೊಂದಿಗೆ ಕಾರ್ಯ ನಿರ್ವಹಿಸುತ್ತೇನೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಪ್ರಾಂಶುಪಾಲ ಹಂಪಣ್ಣ ಸಜ್ಜನಶೆಟ್ಟಿ, ಕರಬಸಯ್ಯ ದಂಡಿಗಿಮಠ, ಶಿಕ್ಷಕರಾದ ಗೂಳಪ್ಪ.ಎಸ್.ಮಲ್ಹಾರ, ರಾಚಯ್ಯ ಸ್ವಾಮಿ ಬಾಡಿಯಾಲ, ಬಸವರಾಜ ಭರಮಶೆಟ್ಟಿ, ಭೀಮಣ್ಣ ನಾಯಕ, ಸತೀಶ ಪರ್ಮಾಂ, ಸಂಗಾರೆಡ್ಡಿ ಪಾಟೀಲ, ಭರತಕುಮಾರ, ಸೌಭಾಗ್ಯ ಸೇರಿದಂತೆ ಇತರರಿದ್ದರು

# ಕರ್ನಾಟಕದ ಕೈಗಾರಿಕಾ ಮತ್ತು ಶೈಕ್ಷಣಿಕ ಅಭಿವೃದ್ಧಿಗೆ ನಾಲ್ವಡಿ ಕೃಷ್ಣರಾಜ ಒಡೆಯರ್ ಕೊಡುಗೆ ಅಪಾರ: ತಹಶೀಲ್ದಾರ ಅನೀಲ ಬಡಗೇರ



**ಜಮಖಂಡಿ:ಜೂ.4:**ನಗರದ ತಾಲೂಕಾಡಳಿತ ಸೌಧದ ತಹಶೀಲ್ದಾರ ಸಭಾಭವನದಲ್ಲಿ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಜಯಂತಿಯನ್ನು ಗುರುವಾರ ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಮಾತನಾಡಿದ ತಹಶೀಲ್ದಾರ ಅನೀಲ ಬಡಗೇರ, "ಆಧುನಿಕ ಭಾರತಕ್ಕೆ ತಕ್ಕಂತೆ ಮೈಸೂರು ರಾಜ್ಯವನ್ನು ಮಾದರಿ ರಾಜ್ಯವನ್ನಾಗಿ ರೂಪಿಸಿದ ಮಹಾನ್ ಆಡಳಿತಗಾರ ನಾಲ್ವಡಿ ಕೃಷ್ಣರಾಜ ಒಡೆಯರ್. ಇಂದು ಮೈಸೂರು, ಬೆಂಗಳೂರು ಹಾಗೂ ಕರ್ನಾಟಕ ಅಭಿವೃದ್ಧಿಯ ಪಥದಲ್ಲಿ ಸಾಗುತ್ತಿರುವುದಕ್ಕೆ ಅವರ ದೂರದೃಷ್ಟಿಯ ವಿಚಾರಧಾರೆಗಳು ಪ್ರಮುಖ ಕಾರಣವಾಗಿವೆ" ಎಂದು ಹೇಳಿದರು.

ಮೈಸೂರು ಸ್ಯಾಂಡಲ್ ಫ್ಯಾಕ್ಟರಿ, ಮಹಾರಾಜ ಕಾಲೇಜು, ಮಹಾರಾಣಿ ಕಾಲೇಜು ಸೇರಿದಂತೆ ಅನೇಕ ಶಿಕ್ಷಣ ಹಾಗೂ ಕೈಗಾರಿಕಾ ಸಂಸ್ಥೆಗಳ ಸ್ಥಾಪನೆ ಮೂಲಕ ಮೈಸೂರು ರಾಜ್ಯದ ಅಭಿವೃದ್ಧಿಗೆ ಅವರು ನೀಡಿದ ಕೊಡುಗೆ ಅಪಾರವಾಗಿದೆ. ಕೈಗಾರಿಕೆಗಳು ಹಾಗೂ ಶಿಕ್ಷಣ ಕ್ಷೇತ್ರಕ್ಕೆ ಅವರು ಹಾಕಿಕೊಟ್ಟ ಭದ್ರ ಅಡಿಪಾಯದ ಫಲವಾಗಿ ಕರ್ನಾಟಕ ಇಂದು ಕೈಗಾರಿಕೆ, ತಂತ್ರಜ್ಞಾನ ಹಾಗೂ ಆರ್ಥಿಕ ಕ್ಷೇತ್ರಗಳಲ್ಲಿ ದೇಶದ ಮುಂಚೂಣಿ ರಾಜ್ಯವಾಗಿ ಬೆಳೆದಿದೆ ಎಂದು ಅಭಿಪ್ರಾಯಪಟ್ಟರು.

ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಸೇವೆ, ಸಾಧನೆ ಹಾಗೂ ದೂರದೃಷ್ಟಿಯನ್ನು ಸ್ಮರಿಸಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸುವ ಮೂಲಕ ಗೌರವ ನಮನ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಸಿರಸ್ತೆದಾರ ಜಿ.ಎಸ್. ಹೋಸಕೇರಿ, ಆಹಾರ ಸಿರಸ್ತೆದಾರ ಬಸವರಾಜ ತಾಳಿಕೋಟಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿ ಮರನೂರ, ಎಂ.ವಿ. ಅಕ್ಕಲಕೋಟ, ಪ್ರವೀಣ ಕೋಣಿ, ಲಕ್ಷ್ಮೀ ಅಂಗಡಿ, ಮಹೇಶ ವಾಡಗಿ, ಪ್ರಜ್ವಲ್ ಲಿಂಗದ, ಅಬ್ಸರ್ ಕಡಿವಾಳ, ಭಗವಾನ್ ಗುಳ್ಳನ್ನವರ ಸೇರಿದಂತೆ ಅನೇಕ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

ಧೈರ್ಯದ ದಾರಿ

ಶುಕ್ರವಾರ: 05–06–2026

# ಯುವಕರು ದುಶ್ಚಟಗಳಿಂದ ದೂರವಿದ್ದು ಆರೋಗ್ಯಯುತ ಸಮಾಜ ನಿರ್ಮಿಸಿ:ಅರವಿಂದ ಹಾಗರಗಿ

**ವಿಜಯಪುರ, ಜೂ. 4:** ಯುವ ಜನತೆ ದುಶ್ಚಟಗಳಿಂದ ದೂರವಿರಬೇಕು. ತಂಬಾಕು ಸೇವನೆ ಸೇವನೆ ತ್ಯಜಿಸಿ, ಆರೋಗ್ಯಯುತ ಸಮಾಜ ನಿರ್ಮಾಣಕ್ಕೆ ಕೈ ಜೋಡಿಸಬೇಕೆಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಅರವಿಂದ ಎಸ್. ಹಾಗರಗಿ ಹೇಳಿದರು.

ಬುಧವಾರ ಜಿಲ್ಲಾಡಳಿತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ತಾಲೂಕು ಆರೋಗ್ಯ ಅಧಿಕಾರಿಗಳ ಕಾರ್ಯಾಲಯ, ಕಲಬುರಗಿಯ ಇಂಡಿಯನ್ ಕ್ಯಾನ್ಸರ್ ಸೊಸೈಟಿ, ವಿಜಯಪುರದ ನಾಗೂರ್ ನರ್ಸಿಂಗ್ ಕಾಲೇಜು ಹಾಗೂ ವಿವಿಧ ಸಂಘ–ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಸಭಾಭವನದಲ್ಲಿ ಹಮ್ಮಿಕೊಂಡಿದ್ದ ವಿಶ್ವ ತಂಬಾಕು ರಹಿತ ದಿನಾಚರಣೆಯ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ದೇಶದ ಭವಿಷ್ಯ. ಯುವಜನತೆ ಯಾವುದೇ ಕಾರಣಕ್ಕೂ ಧೂಮಪಾನ, ತಂಬಾಕು ಸೇವನೇಯಂತಹ ಮಾರಕ ದುಶ್ಚಟಗಳಿಗೆ ಬಲಿಯಾಗದೆ, ತಮ್ಮ ಜೀವನವನ್ನು ಶಿಸ್ತುಬದ್ಧವಾಗಿ ಮತ್ತು ಅಚ್ಚುಕಟ್ಟಾಗಿ ರೂಪಿಸಿಕೊಳ್ಳಬೇಕು ಎಂದು ಕರೆ ನೀಡಿದರು. ತಂಬಾಕು ಮುಕ್ತ ಸಮಾಜ ನಿರ್ಮಾಣದಲ್ಲಿ ವಿದ್ಯಾರ್ಥಿಗಳ ಪಾತ್ರ ದೊಡ್ಡದಿದೆ ಎಂದರು. ಜಿಲ್ಲಾ ಆಸ್ಪತ್ರೆಯ ಡಾ. ಎಂ.ಟಿ.ಆರ್. ಕೋತ್ವಾಲ್ ಅವರು ವಿಶೇಷ ಉಪನ್ಯಾಸ ನೀಡಿ, ಕ್ಯಾನ್ಸರ್ ಮಹಾಮಾರಿಯಾಗಿ ಬೆಳೆಯುವ ಮುನ್ನವೇ ನಾವು ಜಾಗರೂಕರಾಗಿರಬೇಕು. ಆರಂಭಿಕ ಹಂತದಲ್ಲೇ ತಪಾಸಣೆ ಮತ್ತು ಸೂಕ್ತ ಚಿಕಿತ್ಸೆ ಪಡೆದುಕೊಳ್ಳುವುದು ಅತ್ಯಗತ್ಯ. ತಂಬಾಕು ಸೇವನೆಯ ದುಷ್ಪರಿಣಾಮಗಳ ಕುರಿತು ವಿದ್ಯಾರ್ಥಿಗಳು ಕೇವಲ ತಾವಷ್ಟೇ ಜಾಗೃತರಾಗದೇ ತಮ್ಮ ಪೋಷಕರು, ಸ್ನೇಹಿತರು ಮತ್ತು ಸಂಬಂಧಿಕರಲ್ಲೂ ನೆರೆಹೊರೆಯವರಲ್ಲಿಯೂ ಜಾಗೃತಿ ಮೂಡಿಸಬೇಕು ಎಂದರು.

ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಮನೋವೈದ್ಯ ಡಾ. ಮಂಜುನಾಥ ಮಸಳಿ ಅವರು ಮಾತನಾಡಿ, ವಿದ್ಯಾರ್ಥಿಗಳು ಸದಾ ಧನಾತ್ಮಕ ಕಲಿಕಾ ಮನೋಭಾವವನ್ನು ಬೆಳೆಸಿಕೊಳ್ಳಬೇಕು. ಆರೋಗ್ಯಕರ ಜೀವನಶೈಲಿಗೆ ಪೂರಕವಾದ ವಿಚಾರಗಳನ್ನು ಅಳವಡಿಸಿಕೊಂಡು, ದುಶ್ಚಟಗಳಿಂದ ಮುಕ್ತವಾದ ಉತ್ತಮ ಜೀವನವನ್ನು ಸಾಗಿಸಬೇಕು ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಕಲಬುರಗಿಯ ಇಂಡಿಯನ್ ಕ್ಯಾನ್ಸರ್ ಸೊಸೈಟಿಯ ಪ್ರಾದೇಶಿಕ ವಿಭಾಗದ ಪ್ರತಿನಿಧಿಯಾಗಿ ಆಗಮಿಸಿದ್ದ ಗುರುರಾಜ್ ಕುಲಕರ್ಣಿ ಅವರು ವಿದ್ಯಾರ್ಥಿಗಳಿಗೆ ಮತ್ತು ಸಾರ್ವಜನಿಕರಿಗೆ ತಂಬಾಕು ಉತ್ಪನ್ನಗಳಿಂದ ದೂರವಿರುವಂತೆ ಹಾಗೂ ತಂಬಾಕು



ಮುಕ್ತ ಸಮಾಜ ನಿರ್ಮಾಣಕ್ಕೆ ಶ್ರಮಿಸುವಂತೆ ಪ್ರತಿಜ್ಞಾವಿಧಿಯನ್ನು ಬೋಧಿಸಿದರು.

ಜಾಗೃತಿ ಜಾಥಾಕ್ಕೆ ಚಾಲನೆ: ಕಾರ್ಯಕ್ರಮದ ಅಂಗವಾಗಿ ಸಾರ್ವಜನಿಕರಲ್ಲಿ ತಂಬಾಕು ದುಷ್ಪರಿಣಾಮಗಳ ಕುರಿತು ಜಾಗೃತಿ ಮೂಡಿಸಲು ಹಮ್ಮಿಕೊಳ್ಳಲಾಗಿದ್ದ ಬೃಹತ್ ಜಾಗೃತಿ ಜಾಥಾಕ್ಕೆ ಮೂರನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಖಾದರಸಾಬ ಹುಸೇನಸಾಬ ಬೆನಕಟ್ಟಿ, ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಉಚಿತ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಅರವಿಂದ ಹಾಗರಗಿ ಮತ್ತು ರಾಷ್ಟ್ರೀಯ ತಂಬಾಕು ನಿಯಂತ್ರಣ ಕಾರ್ಯಕ್ರಮದ ಅಧಿಕಾರಿ ಡಾ. ರಾಜೇಶ್ವರಿ ಗೋಲಗೇರಿ ಅವರು ಜಂಟಿಯಾಗಿ ಹಸಿರು ನಿಶಾನೆ ತೋರಿಸುವ ಮೂಲಕ ಜಾಥಾಗೆ ಚಾಲನೆ ನೀಡಿದರು.

ಈ ಜಾಗೃತಿ ಜಾಥಾವು ನಗರದ ಶ್ರೀ ಸಿದ್ದೇಶ್ವರ ದೇವಸ್ಥಾನದಿಂದ ಪ್ರಾರಂಭವಾಗಿ, ಗಾಂಧಿ ಚೌಕ್ ವೃತ್ತದ ಮಾರ್ಗವಾಗಿ ಸಾಗಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಾರ್ಯಾಲಯದ ಆವರಣದಲ್ಲಿ ಮುಕ್ತಾಯಗೊಂಡಿತು. ಜಾಥಾದುದ್ದಕ್ಕೂ ವಿದ್ಯಾರ್ಥಿಗಳು ತಂಬಾಕು ವಿರೋಧಿ ಘೋಷಣೆಗಳಿರುವ ಫಲಕಗಳನ್ನು ಪ್ರದರ್ಶಿಸಿ ಸಾರ್ವಜನಿಕರ ಗಮನ ಸೆಳೆದರು.

ಈ ಕಾರ್ಯಕ್ರಮದಲ್ಲಿ ತಾಲೂಕು ಆರೋಗ್ಯ ಶಿಕ್ಷಣಾಧಿಕಾರಿಗಳಾದ ಎನ್. ಆರ್. ಭಗವಾನ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಜಿ. ಎಂ. ಕೋಳೂರು, ನರ್ಸಿಂಗ್ ಕಾಲೇಜಿನ ಪ್ರಾಂಶುಪಾಲರು, ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು. ಜಿಲ್ಲಾ ತಂಬಾಕು ನಿಯಂತ್ರಣ ಘಟಕದ ಸಲಹೆಗಾರರು ಡಾ. ಪ್ರಕಾಶ ಚವ್ಹಾಣ ಹಾಗೂ ಶ್ರೀಕಾಂತ ಪೂಜಾರ ಅವರು ಉಪಸ್ಥಿತರಿದ್ದರು.

# ದೈನಂದಿನ ಜೀವನದಲ್ಲಿ ಸೈಕ್ಲಿಂಗ್ ಅಳವಡಿಸಿಕೊಳ್ಳುವಂತೆ ಚಂದ್ರಶೇಖರ್ ಕರೆ



**ಮೈಸೂರು.ಜೂ.4:–** ದೈಹಿಕ ಆರೋಗ್ಯ, ಶಿಸ್ತು ಹಾಗೂ ಪರಿಸರ ಸ್ನೇಹಿ ಜೀವನಶೈಲಿಯ ಮಹತ್ವವನ್ನು ಒತ್ತಿಹೇಳುತ್ತಾ, ಮೈಸೂರು ಅರಮನೆ ಉಪವಿಭಾಗದ ಸಹಾಯಕ ಪೊಲೀಸ್ ಆಯುಕ್ತ (ACP) ಶ್ರೀ ಚಂದ್ರಶೇಖರ್ ಅವರು ಯುವಜನತೆ ಸೇರಿದಂತೆ ಸಾರ್ವಜನಿಕರು ತಮ್ಮ ದೈನಂದಿನ ಜೀವನದಲ್ಲಿ ಸೈಕ್ಲಿಂಗ್ ಅಳವಡಿಸಿಕೊಳ್ಳುವಂತೆ ಕರೆ ನೀಡಿದರು.ಅವರು ಇಂದು ಸರ್ಕಾರಿ ಯುವ ಹಾಸ್ಟಲ್ ಮೈ ಭಾರತ್ ಮೈಸೂರು, ಮೈಸೂರು ಅಥ್ಲೀಟ್ಸ್ ಕ್ಲಬ್, ರಾಯಲ್ ರೈಡರ್ಸ್ ಮೈಸೂರು, ಸೈಕ್ಲೋಪೀಡಿಯಾ ಮೈಸೂರು ಹಾಗೂ ಮೈಸೂರು ಸೈಕ್ಲಿಂಗ್ ತಂಡಗಳ ಸಹಯೋಗದಲ್ಲಿ ಆಯೋಜಿಸಲಾಗಿದ್ದ ವಿಶ್ವ ಬೈಸಿಕಲ್ ದಿನದ ಸೈಕಲ್ ಯಾಲಿಯ ಸಮಾರೋಪ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿ ಮಾತನಾಡಿದರು.

ಕಾರ್ಯಕ್ರಮದಲ್ಲಿ 50ಕ್ಕೂ ಹೆಚ್ಚು ಸೈಕ್ಲಿಂಗಳು ಭಾಗವಹಿಸಿ ಆರೋಗ್ಯಕರ ಜೀವನ, ರಸ್ತೆ ಸುರಕ್ಷತೆ ಹಾಗೂ ಪರಿಸರ ಸಂರಕ್ಷಣೆಯ ಕುರಿತು ಜಾಗೃತಿ ಮೂಡಿಸಿದರು.ಇದಕ್ಕೂ ಮುನ್ನ ಕೋಟೆ ಆಂಜನೇಯ ಸ್ವಾಮಿ ದೇವಸ್ಥಾನದ ಬಳಿ ನಡೆದ ಉದ್ಘಾಟನಾ ಕಾರ್ಯಕ್ರಮದಲ್ಲಿ ಸಾರ್ವಜನಿಕ ಗ್ರಂಥಾಲಯ ಇಲಾಖೆಯ ಉಪ ನಿರ್ದೇಶಕರಾದ ಶ ಬಿ. ಮಂಜುನಾಥ್ ಅವರು ಸೈಕಲ್ ಯಾಲಿಗೆ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ವಾಣಿಜ್ಯ ತೆರಿಗೆ ಇಲಾಖೆಯ ನಿವೃತ್ತ ಉಪ ಆಯುಕ್ತರಾದ ರಮೇಶ್ ನರಸಯ್ಯ ಹಾಗೂ ಬಾಲ್ಯ ಫೌಂಡೇಶನ್ ಅಧ್ಯಕ್ಷರಾದ ಅನಿಲ್ ಅವರು ಉಪಸ್ಥಿತರಿದ್ದರು.ಕಾರ್ಯಕ್ರಮದ ಆರಂಭದಲ್ಲಿ ಮೈ ಭಾರತ್ ಮೈಸೂರು ಜಿಲ್ಲಾ ಯುವ ಅಧಿಕಾರಿ ಅಖಿಲ್ ಪಿ. ಅವರು ಸ್ವಾಗತ ಭಾಷಣ ಮಾಡಿ, ವಿಶ್ವ ಬೈಸಿಕಲ್ ದಿನದ ಮಹತ್ವ ಹಾಗೂ ಆರೋಗ್ಯಕರ ಮತ್ತು ಪರಿಸರ ಸ್ನೇಹಿ ಜೀವನಶೈಲಿಯನ್ನು ಬೆಳೆಸುವಲ್ಲಿ ಸೈಕ್ಲಿಂಗ್‌ನ ಪಾತ್ರವನ್ನು ವಿವರಿಸಿದರು.

ಸಂದರ್ಭದಲ್ಲಿ ಮಾತನಾಡಿದ ಬಿ. ಮಂಜುನಾಥ್ ಅವರು ದೈನಂದಿನ ಜೀವನದಲ್ಲಿ ದೈಹಿಕ ಚಟುವಟಿಕೆಗಳ ಅಗತ್ಯತೆಯನ್ನು ಒತ್ತಿ ಹೇಳಿದರು. ರಮೇಶ್ ನರಸಯ್ಯ ಅವರು ಪರಿಸರ ಸಂರಕ್ಷಣೆಯಲ್ಲಿ ಸೈಕ್ಲಿಂಗ್‌ನ ಮಹತ್ವವನ್ನು ವಿವರಿಸಿದರು. ಅನಿಲ್ ಅವರು ಯುವಜನರಲ್ಲಿ ಆರೋಗ್ಯ ಹಾಗೂ ಪರಿಸರ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಆಯೋಜಿಸಲಾದ ಈ ಕಾರ್ಯಕ್ರಮವನ್ನು ಶ್ಲಾಘಿಸಿದರು.ಯಾಲಿಯು ಕೋಟೆ ಆಂಜನೇಯ ಸ್ವಾಮಿ ದೇವಸ್ಥಾನ ಹಾರ್ಡಿಂಗ್ ಸರ್ಕಲ್ (ಆರ್ ಗೇಟ್) ಗನ್ ಹೌಸ್ ಸರ್ಕಲ್ ಬಸವೇಶ್ವರ ಸರ್ಕಲ್ ರಾಮಸ್ವಾಮಿ ಸರ್ಕಲ್ ಅಗ್ನಿಶಾಮಕ ದಳ ವೃತ್ತ (ಸರಸ್ವತಿಪುರಂ) ಕುಕ್ಕರಹಳ್ಳಿ ಗದ್ದಿಗೆ ರಸ್ತೆ ಸರ್ಕಾರಿ ಯುವ ವಸತಿ ನಿಲಯ, ಮೈಸೂರು ಮಾರ್ಗವಾಗಿ ಸಂಚರಿಸಿತು.ಸಮಾರೋಪ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿದ ಎಸಿಪಿ ಚಂದ್ರಶೇಖರ್ ಅವರು ಸೈಕ್ಲಿಂಗ್ ಮೂಲಕ ಆರೋಗ್ಯ, ಪರಿಸರ ಸಂರಕ್ಷಣೆ ಹಾಗೂ ಸಾಮಾಜಿಕ ಜವಾಬ್ದಾರಿಯನ್ನು ಉತ್ತೇಜಿಸುವಲ್ಲಿ ಸಂಘಟಕರ ಪ್ರಯತ್ನವನ್ನು ಶ್ಲಾಘಿಸಿದರು. ಇಂತಹ ಕಾರ್ಯಕ್ರಮಗಳು ಆರೋಗ್ಯಕರ ಸಮಾಜ ನಿರ್ಮಾಣಕ್ಕೆ ನೆರವಾಗುತ್ತವೆ ಎಂದು ಅವರು ಅಭಿಪ್ರಾಯಪಟ್ಟರು.

ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದ ಎಲ್ಲಾ ಅತಿಥಿಗಳು, ಭಾಗವಹಿಸಿದ ಸೈಕ್ಲಿಂಗ್‌ಗಳು, ಸ್ವಯಂಸೇವಕರು ಹಾಗೂ ಸಹಯೋಗಿ ಸಂಸ್ಥೆಗಳಿಗೆ ಸಂಘಟಕರು ಕೃತಜ್ಞತೆ ಸಲ್ಲಿಸಿದರು.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
6360866626


# ಸಾರ್ವಜನಿಕ ಜಾಗದಲ್ಲಿ ಕಸ ಎಸೆದರೆ 'ಎಫ್‌ಐಆರ್ ದಂಡ ಖಚಿತ..!; 5 ಪ್ರಕರಣಗಳಲ್ಲಿ 30 ಸಾವಿರ ದಂಡ ವಸೂಲಿ

**ಪುತ್ತೂರು;** ಸಾರ್ವಜನಿಕ ಪ್ರದೇಶದಲ್ಲಿ ಬೇಕಾಬಿಟ್ಟಿ ತ್ಯಾಜ್ಯ ಎಸೆದ 4 ಪ್ರಕರಣಗಳಿಗೆ ತಲಾ 5 ಸಾವಿರ ದಂಡ ಹಾಗೂ ತೋಡಿಗೆ ಮಾಂಸ ಎಸೆದ ಪ್ರಕರಣಕ್ಕೆ ಸಂಬಂಧಿಸಿ 10 ಸಾವಿರ ದಂಡ ವಿಧಿಸಿದ ಪ್ರಕರಣ ಪುತ್ತೂರಿನ ಕಬಕ ಮತ್ತು ನರಿಮೊಗರು ಗ್ರಾಪಂಗಳಲ್ಲಿ ನಡೆದಿದೆ. ಪುತ್ತೂರು ತಾಪಂ ಕಾರ್ಯನಿರ್ವಹಣಾಧಿಕಾರಿ ನವೀನ್‌ಕುಮಾರ್ ಭಂಡಾರಿ ಅವರ ನಿರ್ದೇಶನದಂತೆ ಗ್ರಾಪಂ ಈ ಕ್ರಮಕ್ಕೆ ಮುಂದಾಗಿದೆ.

ಕಳೆದ ಹಲವು ಸಮಯದಿಂದ ಸ್ವಚ್ಛ ಭಾರತ್ ಮಿಷನ್ ಅಡಿಯಲ್ಲಿ ಜನಸಾಮಾನ್ಯರಿಗೆ ಅರಿವು ಮೂಡಿಸುವ ನಿಟ್ಟಿನಲ್ಲಿ ಸ್ವಚ್ಛ ಶನಿವಾರ, ನಮ್ಮ ಸಂಸ್ಕೃತಿ ಸ್ವಚ್ಛ ಸಂಸ್ಕೃತಿ ಮತ್ತಿತರ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ. ಆದರೂ ಕೆಲವರು ಸಾರ್ವಜನಿಕ ಪ್ರದೇಶದಲ್ಲಿ ಕಸ–ತ್ಯಾಜ್ಯ ಎಸೆಯುವ ಛಾಳಿಯನ್ನು ಮುಂದುವರಿಸುತ್ತಿದ್ದಾರೆ. ಈ ನಿಟ್ಟಿನಲ್ಲಿ ಕಠಿಣ ಕಾನೂನುಕ್ರಮ ವಹಿಸುವುದು ಅನಿವಾರ್ಯವಾದ ಹಿನ್ನಲೆಯಲ್ಲಿ ಇದೀಗ ಕಸ ಎಸೆದವರನ್ನು ಪತ್ತೆ ಹಚ್ಚಿ ಅವರಿಗೆ ರೂ.5 ಸಾವಿರ ದಂಡ ವಿಧಿಸುವ ಮೂಲಕ ನಾಗರಿಕಪ್ರಜ್ಞೆಯನ್ನು ಎಚ್ಚರಿಸುವ ಕೆಲಸಕ್ಕೆ ತಾಲೂಕು ಆಡಳಿತ ಮತ್ತು ಗ್ರಾಮಾಡಳಿತಗಳು ಮುಂದಾಗಿವೆ.

ಕಬಕ 4 ಪ್ರಕರಣ 20 ಸಾವಿರ ದಂಡ: ರಸ್ತೆ ಬದಿಯಲ್ಲಿ ಕಸ ಎಸೆಯುವ 5 ಪ್ರಕರಣದಲ್ಲಿ ಕಸದ ಮೂಟೆಯಲ್ಲಿ ಹುಡುಕಾಡಿ ಅದರಲ್ಲಿ ಪಾರ್ಸೆಲ್ ಗಳು ಬಂದ ಲಕೋಟೆಗಳನ್ನು ಗುರುತಿಸಿ ಅವರ ವಿಳಾಸ ಪತ್ತೆ ಹಚ್ಚಿದ ಪಿಡಿಒ, ಸಿಬಂದಿಗಳು, ಸಂಜೀವಿನಿ ಮತ್ತು ಆಶಾ ಕಾರ್ಯಕರ್ತೆಯರ ಶ್ರಮದಿಂದ ಕಸ ಎಸೆಯುವ ಮಂದಿಗಳನ್ನು ಗುರುತಿಸಲಾಗಿದೆ. ಈ 5 ಮಂದಿಯಲ್ಲಿ 4 ಮಂದಿಗೆ ದಂಡ ವಿಧಿಸಿ ರೂ.20 ಸಾವಿರವನ್ನು ಪಿಡಿಒ ಸುಭಾಶ್ಚಂದ್ರ ಅವರು ವಸೂಲಿ ಮಾಡಿದ್ದಾರೆ. ಓರ್ವ ವ್ಯಕ್ತಿ ದಂಡ ಪಾವತಿಸಲು ನಿರಾಕರಿಸಿದ್ದು, ಆತನ ವಿರುದ್ಧ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ.

ಮಾಂಸ ಎಸೆದಾತನಿಗೆ 10 ಸಾವಿರ ದಂಡ: ನರಿಮೊಗರು ಗ್ರಾಪಂ ವ್ಯಾಪ್ತಿಯ ಕೈಪಂಗಳ ಎಂಬಲ್ಲಿ ತೋಡಿಗೆ ಗೋಣಿಚೀಲವೊಂದರಲ್ಲಿ ವ್ಯಕ್ತಿಯೊಬ್ಬ ಮಾಂಸದ ತ್ಯಾಜ್ಯ ಎಸೆದಿದ್ದು, ಇದನ್ನು ವೀಕ್ಷಿಸಿದ ಸಾರ್ವಜನಿಕರು ಈತನ ಫೋಟೋ ತೆಗೆದು ಗ್ರಾಪಂಗೆ ಮಾಹಿತಿ ನೀಡಿದ್ದರು. ಈತನ ವಿರುದ್ಧ ಪೊಲೀಸ್



ಠಾಣೆಗೆ ದೂರು ನೀಡಿದ ಅಭಿವೃದ್ಧಿ ಅಧಿಕಾರಿ ಆಶಾ ಅವರು ಆತನಿಂದ 10 ಸಾವಿರ ದಂಡ ವಸೂಲಿ ಮಾಡಿದ್ದಾರೆ.

ಕಸ ಎಸೆದರೆ ಎಫ್‌ಐಆರ್..: ಸಾರ್ವಜನಿಕ ಪ್ರದೇಶದಲ್ಲಿ ಕಸ ಮತ್ತು ತ್ಯಾಜ್ಯ ಎಸೆಯುವ ಮೂಲಕ ಪರಿಸರವನ್ನು ಹಾಳು ಮಾಡುವ ವಿಕೃತಿ ಇನ್ನು ನಡೆದರೆ ಅಂತಹ ವ್ಯಕ್ತಿಗಳ ವಿರುದ್ಧ ಎಫ್‌ಐಆರ್ ದಾಖಲಿಸಲಾಗುವುದು. ಜತೆಗೆ ದಂಡ ವಿಧಿಸಲಾಗುವುದು. ಕೇವಲ ಮಾತುಗಳಲ್ಲಿ ಹೇಳಿದರೆ ಕೆಲವರು ಕೇಳುತ್ತಿಲ್ಲ. ಅದಕ್ಕಾಗಿ ದಂಡ ವಿಧಿಸುವ ಕೆಲಸ ಮಾಡಲಾಗುತ್ತಿದೆ. ಸ್ವಚ್ಛ ಮತ್ತು ಸುಂದರ ವಾತಾವರಣ ನಿರ್ಮಾಣ ಮಾಡಲು ಜನತೆ ಸಹಕಾರ ನೀಡಬೇಕು– ನವೀನ್ ಭಂಡಾರಿ ತಾಪಂ ಕಾರ್ಯನಿರ್ವಹಣಾಧಿಕಾರಿ ಪುತ್ತೂರು.

ಕಾರ್ಯಕರ್ತರ ಸಂಭ್ರಮಾಚರಣೆ: ಮಂಗಳೂರು: ಕರ್ನಾಟಕದ 25ನೇ ಮುಖ್ಯಮಂತ್ರಿಯಾಗಿ ಡಿ.ಕೆ.ಶಿವಕುಮಾರ್ ಅವರು ಬುಧವಾರ ಪ್ರಮಾಣವಚನ ಸ್ವೀಕರಿಸಿದ ಹಿನ್ನೆಲೆಯಲ್ಲಿ ಮಲ್ಲಿಕಟ್ಟೆಯ ಜಿಲ್ಲಾ ಕಾಂಗ್ರೆಸ್ ಭವನದಲ್ಲಿ ಪಕ್ಷದ ಕಾರ್ಯಕರ್ತರು ಸಂಭ್ರಮಾಚರಣೆ ನಡೆಸಿದರು.ಈ ಸಂದರ್ಭ ಕಾರ್ಯಕರ್ತರು ಪಟಾಕಿ ಸಿಡಿಸಿ, ಸಿಹಿ ಹಂಚುವ ಮೂಲಕ ಸಂತಸ ವ್ಯಕ್ತಪಡಿಸಿದರು. ಮುಖಂಡರಾದ ಟಿ.ಕೆ.ಸುಧೀರ್, ಭರತೇಶ್ ಅಮೀನ್, ಜೀತೇಂದ್ರ ಜೆ.ಸುವರ್ಣ, ಯೋಗಿಶ್ ಕುಮಾರ್, ಉದಯ್ ಆಚಾರ್ಯ, ಹನೀಫ್ ಬಜಾಲ್, ವೆಲ್ವಿನ್, ವಿನೋದ್ ರಾಜ್ ಪಣಂಬೂರು, ಲಕ್ಷ್ಮಣ್ ಶೆಟ್ಟಿ, ಪ್ರಶಾಂತ್ ಅಮೀನ್, ಉದಯ್ ಕುಂದರ್ ಉಪಸ್ಥಿತರಿದ್ದರು.

# ಜೂ.5–7; ಪುತ್ತೂರಿನಲ್ಲಿ ಹಲಸು ಮೇಳ




**ಪುತ್ತೂರು:** ಪುತ್ತೂರು ನವತೇಜ ಟ್ರಸ್ಟ್ ನೇತೃತ್ವದಲ್ಲಿ ಮುಳಿಯ ಮ್ಯಾನೇಜ್ಡ್ ಫಾರ್ಮ್ ಲ್ಯಾಂಡ್ ಪ್ರಾಯೋಜಕತ್ವದಲ್ಲಿ ಹಲಸು ಮತ್ತು ಹಣ್ಣುಗಳ ಮೇಳವು ಹಣ್ಣುಗಳ ಪ್ರದರ್ಶನ, ಮೌಲ್ಯವರ್ಧಿತ ಉತ್ಪನ್ನ, ಕೃಷಿ ಪರಿಕರಗಳ ಮಳಿಗೆಗಳೊಂದಿಗೆ ಜೂ. 5ರಿಂದ 7ರ ವರೆಗೆ ಪುತ್ತೂರಿನ ಕಿಲ್ಲೆ ಮೈದಾನದಲ್ಲಿ ನಡೆಯಲಿದೆ ಎಂದು ಟ್ರಸ್ಟ್ ಅಧ್ಯಕ್ಷ ಅನಂತಪ್ರಸಾದ್ ನೈತ್ತಡ್ಕ ತಿಳಿಸಿದರು.ಅವರು ಪುತ್ತೂರಿನಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಕಳೆದ 7 ಆವೃತ್ತಿಗಳಲ್ಲಿ ಮೇಳವು ಯಶಸ್ವಿಯಾಗಿ ನಡೆದಿದ್ದು, ಪ್ರಸ್ತುತ 8ನೇ ಆವೃತ್ತಿಯ ಮೇಳ ನಡೆಯುತ್ತಿದೆ. ಮೇಳದಲ್ಲಿ ನರ್ಸರಿ ಗಿಡಗಳು, ಹಣ್ಣುಗಳು, ಕೃಷಿ ಪ್ರಧಾನ ಪರಿಕರಗಳು, ಹಣ್ಣಿನ ಮೌಲ್ಯವರ್ಧಿತ ಉತ್ಪನ್ನಗಳು, ಹಲಸಿನ 80 ಕ್ಕೂ ಅಧಿಕ ಬಗೆಯ ಆಹಾರ ಉತ್ಪನ್ನಗಳ ಮಳಿಗೆಗಳು, ಗೇರು ಹಣ್ಣಿನ ಉತ್ಪನ್ನಗಳು, 25 ಕ್ಕೂ ಅಧಿಕ ಮಾವಿನ ತಳಿಗಳು, ವಿದೇಶಿ ಹಣ್ಣುಗಳ ಪ್ರದರ್ಶನವಿರುತ್ತದೆ ಎಂದರು.ಜೂ. 5ರಂದು ಬೆಳಗ್ಗೆ 9.30ಕ್ಕೆ ಪುತ್ತೂರಿನ ವೈದ್ಯ ಡಾ.ಕೆ.ರಮೇಶ್ ಭಟ್ ಮಳಿಗೆಗಳನ್ನು ಉದ್ಘಾಟಿಸಲಿದ್ದಾರೆ. ಸಂಜೆ 4ಕ್ಕೆ ನವತೇಜ ಟ್ರಸ್ಟ್ ಅಧ್ಯಕ್ಷ ಅನಂತಪ್ರಸಾದ್ ನೈತ್ತಡ್ಕ ಅವರ ಅಧ್ಯಕ್ಷತೆಯಲ್ಲಿ ಮೇಳವನ್ನು ಕ್ಯಾಂಪ್ಕೋ ನಿರ್ದೇಶಕ ಮುರಳಿಕೃಷ್ಣ ಚಳ್ಳಂಗಾರು ಉದ್ಘಾಟಿಸಲಿದ್ದಾರೆ. ಪರಿಸರ–ಜಲ ತಜ್ಞ ಶ್ರೀಪಡ್ರೆ ದಿಕ್ಸೂಚಿ ಭಾಷಣ ಮಾಡಲಿದ್ದು, ಪುತ್ತೂರು ಗೇರು ಸಂಶೋಧನಾಲಯ ನಿರ್ದೇಶನಾಲಯದ ವಿಜ್ಞಾನಿ ಡಾ. ವೀಣಾ ಶುಭಹಾರೈಸಲಿದ್ದಾರೆ. ಈ ಸಂದರ್ಭದಲ್ಲಿ ಡಾ. ನರೇಂದ್ರ ರೈ ದೇರ್ಲ ಅವರ 'ಹಲಸಿನಲ್ಲಿ ಹಸಿರು ಕ್ರಾಂತಿ' ಕೃತಿ ಬಿಡುಗಡೆಗೊಳ್ಳಲಿದೆ.ಜೂ. 6ರಂದು ಬೆಳಗ್ಗೆ 11ಕ್ಕೆ ಹಣ್ಣುಗಳೊಂದಿಗೆ ಮಾತುಕತೆ ವಿಚಾರಗೋಷ್ಠಿ ನಡೆಯಲಿದ್ದು, ಮುಳಿಯ ಕೇಶವ ಪ್ರಸಾದ್, ಕೊಕ್ಕೋ–ಕಾಫಿ ಬೆಳೆಗಾರ ಚಂದ್ರಶೇಖರ್ ತಾಳ್ತಜೆ, ಮೂಲ್ಕಿಯ ಗೇರು ಹಣ್ಣಿನ ಮೌಲ್ಯವರ್ಧಕ ಕೆನ್ಯೂಟ್ ಅರಾನ್ಹಾ ಅವರು ವಿಷಯ ಪ್ರಸ್ತುತಿ ಮಾಡಲಿದ್ದಾರೆ. ಜೂ. 7ರಂದು ಬೆಳಗ್ಗೆ 10ಕ್ಕೆ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರಿಗೆ ಹಲಸು–ಮಾವು–ಕೃಷಿ ರಸಪ್ರಶ್ನೆ ನಡೆಯಲಿದ್ದು, ಬಳಿಕ ಹಲಸು ವೈವಿಧ್ಯ–ವಿವಿಧ ಸ್ಪರ್ಧೆಗಳು ನಡೆಯಲಿದೆ.ಸಂಜೆ 4ಕ್ಕೆ ಸಮಾರೋಪ ಸಮಾರಂಭ ನಡೆಯಲಿದ್ದು, ನವತೇಜ ಟ್ರಸ್ಟಿನ ವೇಣುಗೋಪಾಲ್ ಅವರು ಸಮಾಪನ ವರದಿ ನೀಡಲಿದ್ದಾರೆ. ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಸದಸ್ಯ ಕಿಶೋರ್ ಕುಮಾರ್ ಪುತ್ತೂರು, ಜೇಸಿಐ ವಲಯ ಅಧ್ಯಕ್ಷ ಸಂತೋಷ್ ಕುಮಾರ್ ಶೆಟ್ಟಿ, ಪುತ್ತೂರು ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಸುಧಾಕರ ಸುವರ್ಣ, ಪುತ್ತೂರು ಗ್ರಾಮಜನ್ಯ ರೈತೋತ್ಪಾದಕ ಸಂಸ್ಥೆಯ ನಿರ್ದೇಶಕ ನಿರಂಜನ್ ಪೋಳ್ಯ ಭಾಗವಹಿಸಲಿದ್ದಾರೆ ಎಂದರು.

ಸುದ್ದಿಗೋಷ್ಠಿಯಲ್ಲಿ ನವತೇಜ ಟ್ರಸ್ಟಿನ ವೇಣುಗೋಪಾಲ್, ಸುಹಾಸ ಮರಿಕೆ, ಮುಳಿಯ ಸಂಸ್ಥೆಯ ರಜತ್ ಉಪಸ್ಥಿತರಿದ್ದರು.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123. Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE